ವಿಜಯಪುರ | ಸಂಪುಟ 01 | ಸಂಚಿಕೆ 262 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಮಂಗಳವಾರ ಡಿಸೆಂಬರ್ 12, 2023



"ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡಿದ್ದ ಸಂವಿಧಾನದ 370 ನೇ ವಿಧಿ ರದ್ದುಗೊಳಿಸಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ಸುಪ್ರಿಂಕೋರ್ಟ್ ಪಂಚ ಸದಸ್ಯರ ಸಾಂವಿಧಾನಿಕ ಪೀಠ ಎತ್ತಿ ಹಿಡಿದಿರುವುದು ಸತ್ಯ ಹಾಗೂ ಜನಹಿತಕ್ಕೆ ಸಂದ ಜಯವಾಗಿದೆ."

– ಉಮೇಶ ಕಾರಜೋಳ
ವಿಜಯಪುರ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರು

ತೆಲಂಗಾಣದ ಚುನಾವಣೆ ಸಂದರ್ಭ ನೀಡಿದ್ದ ಹೇಳಿಕೆ ವಿವಾದಕ್ಕೆ ಕಾರಣ | ವಿಧಾನಸಭೆಯೊಳಗೆ ಅಹೋರಾತ್ರಿ ಪ್ರತಿಭಟನೆ

# ಜಮೀರ್ ವಜಾಗೊಳಿಸಲು ವಿಪಕ್ಷಗಳ ಆಗ್ರಹ

ಬೆಳಗಾವಿ: ತೆಲಂಗಾಣದ ವಿಧಾನಸಭೆ ಚುನಾವಣೆ ಪ್ರಚಾರದ ಸಂದರ್ಭದಲ್ಲಿ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ನೀಡಿದ್ದ ಹೇಳಿಕೆ ವಿವಾದವಾಗಿದ್ದು, ಅವರನ್ನು ವಜಾಗೊಳಿಸಬೇಕೆಂದು ಒತ್ತಾಯಿಸಿ ಬಿಜೆಪಿ ಸೋಮವಾರ ವಿಧಾನಸಭೆಯೊಳಗೆ ಅಹೋರಾತ್ರಿ ಪ್ರತಿಭಟನೆ ನಡೆಸಿತು.

ಸೋಮವಾರ ಬಿಜೆಪಿ ಶಾಸಕರು ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಘೋಷಣೆ ಕೂಗಿದ್ದಲ್ಲದೆ ವಜಾಗೊಳಿಸುವಂತೆ ಒತ್ತಾಯಿಸಿದರು. ತೆಲಂಗಾಣದಲ್ಲಿ ಭಾಷಣ ಮಾಡಿದ ಖಾನ್, ಕರ್ನಾಟಕ ವಿಧಾನಸಭೆಯಲ್ಲಿ ಮೊದಲ ಬಾರಿಗೆ ಶಾಸಕರು ಮುಸ್ಲಿಂ ಸ್ಪೀಕರ್‌ಗೆ ಕೈ ಜೋಡಿಸಿ ಗೌರವ ತೋರಿಸಬೇಕು ಎಂದು ಹೇಳಿದ್ದರು, ಸದನದಲ್ಲಿ ಸದ್ಯ ಈ ವಿಚಾರ ಭಾರಿ ವಾದ ವಿವಾದಕ್ಕೆ ಕಾರಣವಾಗಿದೆ.

ಅಧಿವೇಶನದಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಲು ಜಮೀರ್ ಖಾನ್ ಅವರು ಎದ್ದುನಿಂತ ತಕ್ಷಣ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಮತ್ತು ಇತರ ಬಿಜೆಪಿ ಶಾಸಕರು ಪ್ರತಿಭಟನೆಯನ್ನು ಪ್ರಾರಂಭಿಸಿದರು. ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಸದನದ ಬಾವಿಗೆ ಇಳಿದು ಪ್ರತಿಭಟನೆ ನಡೆಸಿದ್ದಲ್ಲದೆ, ಜಮೀರ್ ಅವರನ್ನು ಸಂಪುಟದಿಂದ ವಜಾಗೊಳಿಸಬೇಕು ಎಂದು ವಿಪಕ್ಷ ನಾಯಕ ಅಶೋಕ್ ಒತ್ತಾಯಿಸಿದರು.



ಜಮೀರ್ ಖಾನ್ ಸ್ಪೀಕರ್ ಕುರ್ಚಿಗೆ ಅಪಖ್ಯಾತಿ ತಂದಿದ್ದಾರೆ ಎಂದು ಅಶೋಕ್ ಹೇಳಿದರು, ಮತ್ತೊಬ್ಬ ಶಾಸಕ ಡಾ ಸಿ. ಎನ್ ಅಶ್ವಥ್ ನಾರಾಯಣ ಅವರು ಸಚಿವ ಸ್ಥಾನಕ್ಕೆ ಅಗೌರವ ತೋರಿದ್ದಾರೆ ಎಂದು ಆರೋಪಿಸಿದ್ದು ಅವರು "ಶಾಸಕರಾಗಲು ಅರ್ಹರಲ್ಲ" ಎಂದು ಹೇಳಿದರು.

ಸ್ಪೀಕರ್ ಯುಟಿ ಖಾದರ್ ಅವರು ಈ ವಿಷಯದ ಬಗ್ಗೆ ನೋಟಿಸ್ ನೀಡುವಂತೆ ಪ್ರತಿಪಕ್ಷಗಳನ್ನು ಒತ್ತಾಯಿಸಿದರು. ಈ ವಿಚಾರವಾಗಿ ಗದ್ದಲ ಉಂಟಾದ ಹಿನ್ನೆಲೆಯಲ್ಲಿ ಸಭಾಧ್ಯಕ್ಷರು ಸದನವನ್ನು ಮುಂದೂಡಿ ಉಭಯ ಪಕ್ಷಗಳ ನಾಯಕರ ಜತೆ ಮಾತುಕತೆ ನಡೆಸಿ ಸದನ ಸುಗಮವಾಗಿ ನಡೆಯುವಂತೆ ಮಾಡಿದರು.

ಕಲಾಪ ಪುನರಾರಂಭಗೊಂಡಾಗ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಜಮೀರ್ ಖಾನ್ ಅವರನ್ನು ಸಮರ್ಥಿಸಿಕೊಂಡರು. "ಅವರು ಯಾರನ್ನೂ ಅವಮಾನಿಸಲು ಯಾವುದೇ ಭಾಷೆಯನ್ನು ಬಳಸಿಲ್ಲ" ಎಂದರು.

"ಕಾಂಗ್ರೆಸ್ ಹಿಂದೂಗಳನ್ನು ಎರಡನೇ ದರ್ಜೆಯ ಪ್ರಜೆಗಳೆಂದು ಪರಿಗಣಿಸುತ್ತದೆ. ಹಿಂದೂಗಳನ್ನು ಅವಮಾನಿಸಿದಾಗ ಕಾಂಗ್ರೆಸ್ ನಾಯಕ-ರಿಗೆ ನಾಚಿಕೆಯಾಗುವುದಿಲ್ಲವೇ? ಎಂದು ಅಶೋಕ್ ಕೆಂಡಾಮಂಡಲವಾದರು.

ಮಧ್ಯಾಹ್ನ ಊಟದ ವಿರಾಮದ ಬಳಿಕ ಸದನ ಪ್ರಾರಂಭವಾದಾಗಲೂ ಪ್ರತಿಭಟನೆ ಮುಂದುವರೆಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, "ತಾವು ಯಾವುದೇ ಅಸಂವಿಧಾನಿಕ ಪದಗಳನ್ನು ಬಳಸಿಲ್ಲ. ಈ ವಿಷಯವು ಪ್ರಮುಖ ವಿಷಯವಾಗಿದ್ದರೆ, ಕಳೆದ ವಾರ ಅಧಿವೇಶನ ನಡೆದಾಗ ಬಿಜೆಪಿ ಶಾಸಕರು ಅದನ್ನು ಏಕೆ ಪ್ರಸ್ತಾಪಿಸಲಿಲ್ಲ?" ಎಂದು ಪ್ರಶ್ನೆ ಮಾಡಿದರು.

ಬಿಜೆಪಿ ಶಾಸಕರು ಸದನದ ನೆಲದ ಮೇಲೆಯೇ ಇದ್ದರು, ಈ ಸಂದರ್ಭದಲ್ಲಿ ಐದು ಮಸೂದೆಗಳನ್ನು ವಿಧಾನಸಭೆ ಅಂಗೀಕರಿಸಿತು ಮತ್ತು ಇತರ ವಿಷಯಗಳ ಬಗ್ಗೆ ಶಾಸಕರು ಸಂಜೆ 7 ರವರೆಗೂ ಚರ್ಚಿಸಿದರು.

## ಗ್ರಾಪಂಗಳ ವಿವಿಧ ಬೇಡಿಕೆಗಾಗಿ ಸಿಇಓ ಅವರಿಗೆ ಮನವಿ

ಉದಯರಶ್ಮಿ ನ್ಯೂಸ್

ವಿಜಯಪುರ: ವಿವಿಧ ಗ್ರಾಮ ಪಂಚಾಯತಗಳ ಸಮಸ್ಯೆ ಪರಿಹ-ರಿಸಬೇಕೆಂದು ಒತ್ತಾಯಿಸಿ ಜಿಲ್ಲಾ ಗ್ರಾಮ ಪಂಚಾಯತ ಸದಸ್ಯರ ಮಹಾ ಒಕ್ಕೂಟದಿಂದ ಮುಖ್ಯ ಕಾರ್ಯನಿರ್ವಾಹಕ ರಾಹುಲ ಸಿಂದೆ ಅವರಿಗೆ ಮನವಿ ಸಲ್ಲಿಸಲಾಯಿತು.




ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಎಮ್.ಎಚ್. ಪಠಾಣ ಮಾತನಾಡಿ, ಜಿಲ್ಲೆಯ ವಿವಿಧ ಗ್ರಾಮ ಪಂಚಾಯತಗಳ ಅಧ್ಯಕ್ಷ ಉಪಾಧ್ಯಕ್ಷ ಹಾಗೂ ಅಭಿವೃದ್ಧಿ ಅಧಿಕಾರಿಗಳ ಬರಗಾಲ, ಕಾಮಗಾರಿ ಹಾಗೂ ಕುಡಿಯುವ ನೀರಿನ ಸಮಸ್ಯೆ ಸಲುವಾಗಿ ಸಮನ್ವಯ ಸಭೆ ಕರೆಯಬೇಕು. ಪ್ರತಿ ಪಂಚಾಯತಿಗೆ ಒಬ್ಬರಂತೆ ಅಭಿವೃದ್ಧಿ ಅಧಿಕಾರಿಗಳನ್ನು ನೇಮಿಸಬೇಕು. (ಸದ್ಯ ಒಬ್ಬರೆ ಎರಡು ಮೂರ ಪಂಚಾಯತಿಗೆ ಇರುವವರು), ಅಭಿವೃದ್ಧಿಯಲ್ಲಿ ಹಿಂದುಳಿದ ಗ್ರಾಮ ಪಂಚಾಯತಗಳಿಗೆ 15 ನೇ ಹಣಕಾಸ, ಕ್ರಿಯಾಯೋಜನೆ ಹಾಗೂ ಕಾಮಗಾರಿ, ನರೇಗಾ ಕ್ರಿಯಾ ಯೋಜನೆ ಕಾಮಗಾರಿ ಆಗದ ಗ್ರಾಮ ಪಂಚಾಯತಿಗಳಿಗೆ ತಮ್ಮ ನಿರ್ದೇಶನ ನೀಡುವುದು. ಗೌರವಧನವನ್ನು ಬಿಡುಗಡೆ ಆದ ತಕ್ಷಣ ತ್ವರಿತ ಗತಿಯಲ್ಲಿ ಬಟವಡೆ ಮಾಡುವಂತೆ ಅಭಿವೃದ್ಧೀ ಅಧಿಕಾರಿಗಳಿಗೆ ಆದೇಶಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಪ್ರದೀಪ ಚ. ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಚಂದ್ರಶೇಖರ ವಾಲಿ, ಜಿಲ್ಲಾ ಕಾನೂನು ಸಲಹೆಗಾರರಾದ ಬಾಪುಗೌಡ.ಬಿ. ಪಾಟೀಲ, ಇಂಡಿ ತಾಲೂಕಾ ಒಕ್ಕೂಟದ ಅಧ್ಯಕ್ಷ ರಮೇಶ ಮಂಗಳೂರ, ಬಬಲೇಶ್ವರ ತಾಲೂಕಾ ಒಕ್ಕೂಟದ ಅಧ್ಯಕ್ಷರಾದ ವಿನೋದ ಚಿಕ್ಕರೆಡ್ಡಿ, ಹಣಮಾಪೂರ ಗ್ರಾಮ ಪಂಚಾಯತಿ ಅಧ್ಯಕ್ಷ ಶ್ರೀಕಾಂತ ಗಣಿ ಮುಂತಾದವರು ಇದ್ದರು.

### ರಾಜ ನುಡಿ

ದೇವರು ಮಂದಿರಕ್ಕಿಂತ, ಮನುಷ್ಯನ ಹೃದಯ ಮಂದಿರವನ್ನು ಇಷ್ಟ ಪಡುತ್ತಾನಂತೆ. ಏಕೆಂದರೆ ಮಂದಿರದಲ್ಲಿ ಮನುಷ್ಯನ ಆಟ ನಡೆಯುತ್ತದೆ. ಹೃದಯದಲ್ಲಿ ಕೇವಲ ದೇವರದ್ದು ಮಾತ್ರ ನಡೆಯುತ್ತದೆ. ಹೀಗಾಗಿ ಹೃದಯದಲ್ಲಿ ಪ್ರೀತಿಯ ಹೊರತು ಏನನ್ನೂ ಇಟ್ಟುಕೊಳ್ಳಬೇಡಿ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 252

*ಎನ್ನೊಳಗೆ ಗುಹೇಶ್ವರ, ಹೊರಗೆ ಮಹಾಲಿಂಗ*

*ಸಕಲವೆಲ್ಲ ಲಿಂಗದೊಳಗೆ ತೋರಿದನು*
*ಆ ಲಿಂಗದ ಬೆಳಗ ಸಕಲದೊಳಗೆ ತೋರಿದನು*
*ಎನ್ನ ಮನಕ್ಕೆ ಅತಿಶಯವಾಗಿ ತೋರಿ ತೋರಿ ರಕ್ಷಿಸಿದನು*
*ಎನ್ನೊಳಗೆ ತನ್ನ ತೋರಿದನು, ತನ್ನೊಳಗೆ ಎನ್ನ ತೋರಿದನು*
*ಮತ್ತೆ ಎರಡವನೇಕಮಾಡಿ, ಎನ್ನೊಳಗೆ ಗುಹೇಶ್ವರನಾದನು*
*ಹೊರಗೆ ಮಹಾಲಿಂಗವಾಗಿ ನಿಂದನು ಶ್ರೀಗುರುವು.*

*– ಅಲ್ಲಮಪ್ರಭುಗಳು*

ಅಲ್ಲಮಪ್ರಭುಗಳು ಈ ವಚನದಲ್ಲಿ ಸ್ಪಷ್ಟವಾಗಿ ಹೇಳಿದಂತೆ ಎನ್ನೊಳಗೆ ತನ್ನ ತೋ-ರಿದನು, ತನ್ನೊಳಗೆ ಎನ್ನ ತೋರಿದನು ಎನ್ನುವಲ್ಲಿ ಲಿಂಗಪೂಜೆಯಿಂದ ನಮ್ಮ ಚೈತನ್ಯವನ್ನು ನಾವು ಅರಿಯಬಹುದು, ಅಲ್ಲದೆ ಪಿಂಡಾಂಡದಲ್ಲಿಯ ಬೆಳಗು ಮತ್ತು ಬ್ರಹ್ಮಾಂಡದಲ್ಲಿಯ ಬೆಳಗು ಒಂದೇ ಎಂಬ ಸತ್ಯವನ್ನು ಅರಿಯಬಹುದು. ಅವೆರಡನ್ನು ಒಂದುಮಾಡಿ ಅನುಭವಿಸುವುದೇ ಲಿಂಗಪೂಜೆಯ ಮುಖ್ಯ ಉದ್ದೇಶವೆನ್ನುವುದನ್ನು ಅಲ್ಲಮರು ಸ್ಪಷ್ಟಪಡಿಸಿದ್ದಾರೆ, ಅಂತೆಯೇ ಸಕಲವೆಲ್ಲವ ಲಿಂಗದೊಳಗೆ ತೋರಿದನು, ಆ ಲಿಂಗದ ಒಳಗೆ ಸಕಲವ ತೋರಿದನು ಎಂದಿದ್ದಾರೆ. ನಮ್ಮೊಳಗೆ ಅಡಗಿರುವ ಚೈತನ್ಯವನ್ನು ತೋರುವ ಸಾಧನವೆಂದರೆ ಇಷ್ಟಲಿಂಗ. ಇದನ್ನು ದಯಪಾಲಿಸಿದ ಮಹಾಗುರು ಬಸವಣ್ಣನವರು ಮಹಾಲಿಂಗ(ದೈವ)ಸ್ವರೂಪಿಯಾಗಿ ನಮ್ಮೊಂದಿಗಿದ್ದಾರೆ ಎಂದು ನೆನೆದಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಸತ್ಯ ಹಾಗೂ ಜನಹಿತಕ್ಕೆ ಸಂದ ಜಯ :ಕಾರಜೋಳ

ಉದಯರಶ್ಮಿ ನ್ಯೂಸ್

ವಿಜಯಪುರ: ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡಿದ್ದ ಸಂವಿಧಾನದ 370 ನೇ ವಿಧಿ ರದ್ದುಗೊಳಿಸಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ಸುಪ್ರಿಂಕೋರ್ಟ್ ಪಂಚ ಸದಸ್ಯರ ಸಾಂವಿಧಾನಿಕ ಪೀಠ ಎತ್ತಿ ಹಿಡಿದಿರುವುದು ಸತ್ಯ ಹಾಗೂ ಜನಹಿತಕ್ಕೆ ಸಂದ ಜಯವಾಗಿದೆ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಉಮೇಶ ಕಾರಜೋಳ ಹರ್ಷ ವ್ಯಕ್ತಪಡಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ಭಾರತೀಯ ನ್ಯಾಯದಾನ ವ್ಯವಸ್ಥೆ ಅತ್ಯಂತ ಶ್ರೇಷ್ಠ, ಸುಪ್ರೀಂಕೋರ್ಟ್ ತೀರ್ಪಿನಿಂದ ಪ್ರತಿಯೊಬ್ಬ ಭಾರತೀಯ-ರಿಗೂ ಅತ್ಯಂತ ಸಂತೋಷವಾಗಿದೆ. ಕಣಿವೆ ರಾಜ್ಯ ಕಾಶ್ಮೀರ ಪ್ರಗತಿಯಾಗಲು ಈ ವಿಧಿ ರದ್ದಾಗುವುದು ಅವಶ್ಯಕವಾಗಿತ್ತು, ಹೀಗಾಗಿ ಕೇಂದ್ರದಲ್ಲಿರುವ ಬಿಜೆಪಿ ನೇತೃತ್ವದ ಸರ್ಕಾರ ಈ ವಿಧಿ ರದ್ದುಗೊಳಿಸುವ ಮೂಲಕ ದಿಟ್ಟ ಹೆಜ್ಜೆ ಇರಿಸಿತ್ತು, ಆ ಮೂಲಕ ಕಾಶ್ಮೀರ ಪ್ರಗತಿಗೆ ಹೊಸ ಶಕೆ ಆರಂಭವಾದಂತಾಯಿತು, ಆದರೆ ಕೆಲವರು ಇದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೆಟ್ಟಲೇರಿದ್ದರು, ಈ ಬಗ್ಗೆ ವಾದ-ಪ್ರತಿವಾದ ಆಲಿಸಿದ ಸುಪ್ರೀಂಕೋಟ್ ಪಂಚ ಸದಸ್ಯರ ನ್ಯಾಯಪೀಠವು ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡಿದ್ದ ಸಂವಿಧಾನದ 370 ನೇ ವಿಧಿ ರದ್ದುಗೊಳಿಸಿದ ಕೇಂದ್ರ ಸರ್ಕಾರದ ನಿರ್ಧಾರವನ್ನು ಎತ್ತಿ ಹಿಡಿದಿದೆ, ಇದು ಸತ್ಯ ಹಾಗೂ ಜನರ ಹಿತರಕ್ಷಣೆಗಾಗಿ ಕೈಗೊಂಡ ಸರ್ಕಾರದ ಕ್ರಮಕ್ಕೆ ಜಯ ದೊರಕಿದಂತಾಗಿದೆ ಎಂದು ಅವರು ಹೇಳಿದ್ದಾರೆ.

ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ನಡೆದ ಪ್ರಕರಣ

## ಬಹುಮಾನದ ಮೊತ್ತ ಗುಳುಂ ಮಾಡಿದ ಅಧಿಕಾರಿಗಳು

ಉದಯರಶ್ಮಿ ನ್ಯೂಸ್

– ಚೇತನ ಶಿವಶಿಂಪಿ

ಮುದ್ದೇಬಿಹಾಳ: "ದೇವರು ವರ ಕೊಟ್ರೂ ಪೂಜಾರಿ ಕೊಡೊಲ್ಲಾಗ್ಯಾನ ನೋಡ್ರಿ. ನಮಗ ಕೊಡಬೇಕಾದ ಹಣ ಕೊಡಲಾರದ ತಮ್ಮ ಕಡೆನೇ ಇಟಗೊಂಡ ಜೀವಾ ತಿನಾಕತ್ತಾರ ನೋಡ್ರಿ. ಶಿಕ್ಷಕರನ್ನು ಪ್ರೋತ್ಸಾಹಿಸಾಕ ಶಿಕ್ಷಣ ಇಲಾಖೆ ರಗಡ ಸವಲತ್ತುಗಳನ್ನು ಕೊಡತ್ತ, ಆದ್ರ ಈ ಅಧಿಕಾರಿಗಳು ಮಾತ್ರ ಶಿಕ್ಷಕರಿಗೆ ಮುಟ್ಟಬೇಕಾದ್ದನ್ನ ಮುಟ್ಟಸಲಾರದ ಗಪ್ಪನ ಕುಂತಬಿಡತಾರ ನೋಡ್ರಿ.." ಅಂತಾ ಇಲ್ಲಿನ ಕೆಲವು ನೊಂದ ಶಿಕ್ಷಕರು "ಉದಯರಶ್ಮಿ" ಎದುರು ತೋಡಿಕೊಂಡ ಅಳಲಿದು.

ಅಷ್ಟಕ್ಕೂ ಏನಿದು ಪ್ರಕರಣ ಅಂತೀರಾ ಈ ಸ್ಟೋರಿ ಪೂರ್ತಿಯಾಗಿ ಓದಿ..



ಶಿಕ್ಷಣ ಇಲಾಖೆ ಪ್ರತೀ ವರ್ಷ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ಸಹಪಠ್ಯ ಚಟುವಟಿಕೆ ಎಂಬ ತಾಲೂಕು, ಜಿಲ್ಲಾ ಮತ್ತು ರಾಜ್ಯಮಟ್ಟದ ಸ್ಪರ್ದೆಗಳನ್ನು ನಡೆಸುತ್ತೆ. ಈ ಸ್ಪರ್ದೆಗೆ ತಾಲೂಕು ಮಟ್ಟದಲ್ಲಿ 57,700 ರೂಪಾಯಿ ಗಳ ಅನುದಾನ ನೀಡಿ ಸ್ಪರ್ದೆಯಲ್ಲಿ ವಿಜೇತ ಪ್ರಥ-ಮ, ದ್ವಿತೀಯ ಮತ್ತು ತೃತೀಯ ಶಿಕ್ಷಕರಿಗೆ ಪ್ರಶಸ್ತಿ ಜೊತೆಗೆ ನಗದು ಬಹುಮಾನಗಳನ್ನು ನೀಡಲಾಗುತ್ತದೆ.

ಶಿಕ್ಷಕರ ಕಲ್ಯಾಣ ನಿಧಿಯಿಂದ ಪ್ರತೀ ತಾಲೂಕಿಗೆ 7ಪ್ರಾಥಮಿಕ ಜೊತೆಗೆ 7ಪ್ರೌಢ ಹೀಗೆ ಒಟ್ಟು 42 ವಿಜೇತ ಶಿಕ್ಷಕರಿಗೆ ಪ್ರಥಮ ಬಹುಮಾನವಾಗಿ 1500, ದ್ವಿತೀಯ ಬಹುಮಾನವಾಗಿ 1000, ಮತ್ತು ತೃತೀಯ ಬಹುಮಾನವಾಗಿ 500 ರೂಪಾಯಿಗಳಂತೆ ಒಟ್ಟು 42ಸಾವಿರ ರೂಪಾಯಿಗಳನ್ನು ಪ್ರಶಸ್ತಿಯ ಜೊತೆಗೇ ನೀಡಬೇಕು ಎಂದು ಬೆಂಗಳೂ-ರಿನ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತೆ ಬಿ.ಬಿ.ಕಾವೇರಿ ಸೂಕ್ತ ಮಾರ್ಗದರ್ಶನಗಳ ಮೂಲಕ ಅಕ್ಟೋಬರ್ 30 ರಂದು ಸುತ್ತೋಲೆ ಹೊರಡಿಸಿದ್ದಾರೆ.

ಈ ಬಗ್ಗೆ ಇಲ್ಲಿನ ಕ್ಷೇತ್ರ ಶಿಕ್ಷಣಾಧಿಕಾ-ರಿಗಳ ಕಾರ್ಯಾಲಯದ ವತಿಯಿಂದ ಸುತ್ತೋಲೆಗೆ ಸಂಬಂಧಿಸಿದಂತೆ ಸ್ಪರ್ಧೆಯನ್ನು ಏರ್ಪಡಿಸಿದ್ದಾರೆ, ಪ್ರಶಸ್ತಿಗಳನ್ನೂ ನೀಡಿದ್ದಾರೆ. ಆದರೆ ಹಣ ನೀಡಿದ ಬಗ್ಗೆ ವಿಜೇತ ಶಿಕ್ಷಕರ ಸಹಿ ಪಡೆದು ಹಣ ನೀಡದೇ ವಿಜೇತ ಶಿಕ್ಷಕರ ಕೆಂಗಣ್ಣಿಗೆ ಇಲಾಖೆಯವರು ಪಾತ್ರರಾಗಿದ್ದಾರೆ.

ಸ್ಪರ್ದೆ ನಡೆದದ್ದು ನವ್ಹೆಂಬರ್ 23ಕ್ಕೆ. ಅಂದೇ ಪ್ರಶಸ್ತಿ ಪತ್ರ ನೀಡಿದ್ದಾರೆ. ಆದರೆ ಇದುವರೆಗೆ ಯಾವ ಶಿಕ್ಷಕ-ರಿಗೂ ನಗದು ಬಹುಮಾನ ಮಾತ್ರ ಮುಟ್ಟಿಲ್ಲ. ಹಣ ಮುಟ್ಟಿಸುವದಾಗಿ ಹೇಳಿ ಸಹಿ ಪಡೆದಿದ್ದಾರೆ. ಕೂಡಲೇ ಹಣ ನೀಡುವಂತೆ ವಿಜೇತ ಶಿಕ್ಷಕರ ಪೈಕಿ ಕೆಲವರು ಕ್ಷೇತ್ರ ಶಿಕ್ಷಣಾಧಿಕಾ-ರಿಗಳ ಕಾರ್ಯಾಲಯಕ್ಕೆ ಪತ್ರವನ್ನು ಬರೆದದ್ದೂ ಆಯ್ತು. ಆದರೆ ನಗದು ಬಹುಮಾನ ಮಾತ್ರ ನೀಡುತ್ತಿಲ್ಲ. ಇದೆಲ್ಲ ಹಲವು ಸಂಶಗಳನ್ನು ಹುಟ್ಟು ಹಾಕಿದ್ದು ಈ ಕೂಡಲೇ ನಮಗೆ ನೀಡಬೇಕಾದ ನಗದು ಬಹುಮಾನವನ್ನು ನೀಡಬೇಕು ಮತ್ತು ಈ ಬಗ್ಗೆ ಉನ್ನತಮಟ್ಟದ ತನಿಖೆ ನಡೆಸಿ ಇಲಾಖಾ ನಿಯಮಗಳನ್ನು ಗಾಳಿಗೆ ತೂರಿ ವಿಜೇತ ಶಿಕ್ಷಕರಿಗೆ ನೀಡಬೇಕಾದ ನಗದು ಹಣವನ್ನು ನೀಡದ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಂಯುಕ್ತ ಕರ್ನಾಟಕದ ಮೂಲಕ ಮೇಲಾಧಿಕಾ-ರಿಗಳಿಗೆ ಒತ್ತಾಯಿಸಿದ್ದಾರೆ.

> "ನಾನು ಅಧಿಕಾರ ವಹಿಸಿ ಕೆಲವೇ ದಿನಗಳಾಗಿದ್ದರಿಂದ ಈ ಬಗ್ಗೆ ನನ್ನ ಗಮನಕ್ಕಿಲ್ಲ. ಕೂಡಲೇ ಈ ಬಗ್ಗೆ ಪರಿಶೀಲಿಸಿ ವಿಜೇತ ಶಿಕ್ಷಕರಿಗೆ ನಗದು ಬಹುಮಾನವನ್ನು ಮುಟ್ಟಿಸುವ ಕೆಲಸ ಮಾಡುತ್ತೇನೆ. ಮತ್ತು ತಪ್ಪಿತಸ್ಥರ ವಿರುದ್ಧ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸುತ್ತೇನೆ."
>
> – ಬಸಪ್ಪ ಸಾವಳಗಿ ನೂತನ ಕ್ಷೇತ್ರ ಶಿಕ್ಷಣಾಧಿಕಾರಿ ಮುದ್ದೇಬಿಹಾಳ

ಕಲಕೇರಿ ಹೋಬಳಿಗಾಗಿ ಪ್ರತಿಭಟನೆ | ಅಂಗಡಿ ಮುಂಗಟ್ಟುಗಳು ಮುಚ್ಚಿ ಬಂದ್‌ಗೆ ಬೆಂಬಲ ಸೂಚಿಸಿದ ವರ್ತಕರು

# ಕಲಕೇರಿ ಬಂದ್ ಸಂಪೂರ್ಣ ಯಶಸ್ವಿ

ಉದಯರಶ್ಮಿ ನ್ಯೂಸ್

ಕಲಕೇರಿ: 2003 ರಲ್ಲಿ ಕಲಕೇರಿ ತಾಲೂಕಿಗಾಗಿ ಸುಮಾರು 120 ದಿನಗಳ ಕಾಲ ಧರಣಿ ಹೋರಾಟ ಮಾಡಿ ಆಗಿನ ಶಾಸಕರು, ಅಧಿಕಾ-ರಿಗಳ ಗಮನಕ್ಕೆ ತಂದರೂ, ಪ್ರಯೋಜನವಾಗಿಲ್ಲ, 2020ರಲ್ಲಿ ಕಲಕೇರಿಯಲ್ಲಿ ಹೋರಾಟ ಮಾಡಿ ಕಲಕೇರಿಯಿಂದ ತಾಳಿಕೋಟಿವರೆಗೆ ಸಾವಿರಾರು ಜನರೊಂದಿಗೆ ತಾಲೂಕಾ ದಂಡಾಧಿಕಾರಿಗಳ ಮೂಲಕ ಜಿಲ್ಲಾಧಿಕಾರಿ ಹಾಗೂ ಸರಕಾರಕ್ಕೆ ಮನವಿ ಸಲ್ಲಿಸಲಾಗಿತ್ತು, ಕರೋನಾ ನಿಮಿತ್ಯ ಅನಿವಾರ್ಯವಾಗಿ ಹೊರಾಟಕ್ಕೆ ತಡೆ ಹಿಡಿಯಲಾಗಿತ್ತು, ಈಗ ಮತ್ತೆ ಹೋರಾಟ ಚುರುಕುಗೊಂಡಿದ್ದು, ಕಲಕೇರಿ ಹೋಬಳಿ ಆಗುವವರೆಗೂ ನಾವೆಲ್ಲರೂ ಸುಮ್ಮನಿರಲ್ಲ ಹೋರಾಟ ಮುಂದುವರೆಸುತ್ತೇವೆ ಎಂದು ಮಾಜಿ ತಾ.ಪಂ ಸದಸ್ಯ ಲಕ್ಕಪ್ಪ ಬಡಿಗೇರ ಹೇಳಿದರು.

ಪ್ರಗತಿಪರ ಹೋರಾಟಗಾರರ ಒಕ್ಕೂಟ ರಚನಾ ಸಮಿತಿ ವತಿಯಿಂದ ಕಲಕೇರಿ ಹೋಬಳಿ ಮಾಡಬೇಕು ಎಂದು ಸ್ಥಳೀಯ ಡಾ॥ ಬಾಬಾ ಸಾಹೇಬ ಅಂಬೇಡ್ಕರ ವೃತ್ತದಿಂದ ಮುಖ್ಯ ಬಜಾರದವರೆಗೆ ಹಲಿಗೆಯೊಂದಿಗೆ ವಿವಿಧ ಘೋಷಣೆ ಕೂಗುತ್ತಾ ಮೆರವಣಿಗೆ ಮೂಲಕ ಆಗಮಿಸಿ ಟಾಯರ್‌ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರನ್ನು ಉದ್ದೇಶಿಸಿ ಅವರು ಮಾತನಾಡಿದರು.



ಮುಖಂಡರಾದ ಸುಧಾಕರ ಅಡಕಿ ಹಾಗೂ ಹಣಮಂತ ವಡ್ಡರ ಮಾತನಾಡಿ, 20 ಸಾವಿರ ಜನಸಂಖ್ಯೆ ಹೊಂದಿರುವ, ಒಂದು ತಾಲೂಕಿಗೆ ಬೇಕಾಗುವ ಎಲ್ಲಾ ಅರ್ಹತೆಗಳು ಇದ್ದಾಗ್ಯೂ ಕೂಡಾ ಇಲ್ಲಿಯವರೆಗೆ ಹೋಬಳಿಯೂ ಆಗದಿರುವುದು ಈ ಭಾಗದ ಜನಪ್ರತಿನಿಧಿಗಳ ಹಾಗೂ ಅಧಿಕಾರಗಳ ನಿರ್ಲಕ್ಷ್ಯವೇ ಮುಖ್ಯ ಕಾರಣ. ಮುಂಚಿನ ಶಾಸಕರು ಕೇವಲ ಆಶ್ವಾಸನೆ ನೀಡುತ್ತಾ ಖಂಡಿತವಾಗಿಯೂ ಕಲಕೇರಿ ಹೋಬಳಿ ಮಾಡೆ ಮಾಡುತ್ತೇನೆ ಎಂದು ಹಾರಿಕೆ ಉತ್ತರಕೊಟ್ಟು ಹೋದರು, ಈಗಿರುವ ಶಾಸಕರು ಸರಕಾರದ ಮೇಲೆ ಒತ್ತಡ ತಂದು ಕಲಕೇರಿ ಹೋಬಳಿ ಮಾಡಬೇಕು ಎಂದರು.

ಈ ವೇಳೆ ನಿವೃತ್ತ ಶಿಕ್ಷಕ ಎಂ.ಪಿ.ನದಾಫ, ಮುಖಂಡರಾದ ಚಾಂದಪಾಶಾ ಹವಾಲ್ದಾರ, ನಬಿಲಾಲ ನಾಯ್ಕೋಡಿ, ಕಾಶೀಂ ನಾಯ್ಕೋಡಿ, ಸಲೀಂ ನಾಯ್ಕೋಡಿ, ರಾಜು ಅಡಕಿ, ರಮೆಶ ಹೆಂಡಿ, ಈರಘಂಟಿ ಬಡಿಗೇರ, ಸಂಗಮೆಶ ಸಗರ, ಸೇರಿದಂತೆ ಅನೇಕರು ಕಲಕೇರಿ ಹೋಬಳಿ ಆಗಲೆಬೇಕು ಇದರಿಂದ ಕಲಕೇರಿ ಮಾತ್ರವಲ್ಲದೇ ಸುತ್ತಮುತ್ತಲಿನ 40-50 ಹಳ್ಳಿಗಳ ರೈತರು, ವಿದ್ಯಾರ್ಥಿಗಳು, ವ್ಯಾಪಾರಿಗಳು, ಅಂಗವಿಕಲರಿಗೆ, ವಯೋವೃದ್ದರಿಗೆ ಅನುಕೂಲವಾಗಲಿದೆ ಎಂದರು.

ನಂತರ ಸ್ಥಳಕ್ಕಾಗಮಿಸಿದ ತಾಳಿಕೋಟಿ ತಾಲುಕಾ ದಂಡಾಧಿಕಾ-ರಿಗಳಾದ ಕೀರ್ತಿ ಚಾಲಕ ಅವರಿಗೆ ಪ್ರತಿಭಟನಾಕಾರರೆಲ್ಲ ಸೇರಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷರಾದ ರಾಜ ಅಹಮ್ಮದ ಸಿರಸಗಿ, ಮುಖಂಡರಾದ ದೇವಿಂದ್ರ ಜಂಬಗಿ, ಶಾಂತಯ್ಯ ಹಿರೇಮಠ, ಶ್ರೀಶೈಲ ಅಡಕಿ, ಪ್ರವೀಣ ಜಗಶೆಟ್ಟಿ, ಸುಧಾಕರ ಕವದಿ, ಪರಶುರಾಮ ಕುದರಕಾರ, ಅನೀಲ ಬಡಿಗೇರ, ಪರಶುರಾಮ ಬೇಡರ, ರಮೇಶ ಹೆಂಡಿ, ಚಂದ್ರಕಾಂತ ಬಡಿಗೇರ, ಲಾಳೇಮಶಾಕ ನಾಯ್ಕೋಡಿ, ಶರಣು ಕವದಿ, ಸುನೀಲ ಪಾಟೀಲ, ಹಸನ ನಾಗಾವಿ, ಪ್ರಕಾಶ ಯರನಾಳ, ಪ್ರಕಾಶ ಗುಮಶೆಟ್ಟಿ, ಯಮನೂರಿ ಸಿಂದಗೇರಿ, ಮಹಮ್ಮದ ಕೆಂಬಾವಿ, ಶಿವರಾಯ ಮೋಪಗಾರ, ಹಾಜಿಪಾಶಾ ಜಾಗೀರದಾರ, ಅಶ್ಫಾಕ ಅತ್ತಾರ, ಅಶೋಕ ಕಾದಳ್ಳಿ, ಅಶೋಕ ಭೋವಿ ಸೇರಿದಂತೆ ಅನೇಕರು ಇದ್ದರು.

# ಐದು ಕೋಟಿ ಗಿಡ ನೆಡುವ ಯೋಜನೆ :ಸಚಿವ ಎಂ.ಬಿ.ಪಾಟೀಲ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಹಳ್ಳ ತುಂಬುವ ಯೋಜನೆಗಳ ಜೊತೆಯಲ್ಲಿಯೇ ಹಳ್ಳಗಳ ಪಕ್ಕದಲ್ಲಿ ನಾಲ್ಕೈದು ಕೋಟಿ ಗಿಡ ನೆಡುವ ಯೋಜನೆ ರೂಪಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಬಬಲೇಶ್ವರ ಪಟ್ಟಣದ ಹೊರವಲಯದಲ್ಲಿ ಇರಪಾನಗೋಳ ತೋಟದ ವಸ್ತಿ ಬಳಿ ಬಬಲೇಶ್ವರ–ಯಕ್ಕುಂಡಿ ಹಳ್ಳಕ್ಕೆ ಅಂದಾಜು ರೂ. 97.50 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಬ್ರಿಡ್ಜ್ ಕಂ ಬ್ಯಾರೇಜ್ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಬಳಿಕ ನಡೆದ ಸಾರ್ವಜನಿಕ ಸಭೆಯಲ್ಲಿ ಅವರು ಮಾತನಾಡಿದರು.



ವಿಜಯಪುರ ಜಿಲ್ಲೆಯಲ್ಲಿ ಸುಮಾರು 160 ಹಳ್ಳಗಳಿಗೆ ಪ್ರತಿ 100 ಮೀ. ಗೊಂದರಂತೆ ಚೆಕ್ ಡ್ಯಾಂ ನಿರ್ಮಿಸಿ ನೀರು ತುಂಬಿಸಲು ಯೋಜನೆ ರೂಪಿಸಲಾಗಿದೆ. ಈ ಹಳ್ಳಗಳ ಎರಡೂ ಬದಿಗಳಲ್ಲಿ ಸುಮಾರು ನಾಲ್ಕೈದು ಕೋಟಿ ಗಿಡ ನೆಡಲಾಗುವುದು. ಇದರಿಂದ ಅಂತರ್ಜಲ ವೃದ್ಧಿ ಮಾತ್ರವಲ್ಲ, ಜಿಲ್ಲೆಯಲ್ಲಿ ಅರಣ್ಯ ಪ್ರದೇಶವೂ ಹೆಚ್ಚಾಗಲಿದೆ ಎಂದು ಅವರು ತಿಳಿಸಿದರು.

ಈ ಕಾಮಗಾರಿಗೆ ಭೂಮಿಪೂಜೆ ನೆರವೇರಿಸುವ ಮೂಲಕ ಈ ಭಾಗದ ರೈತರ ಬೇಡಿಕೆ ಈಡೇರಿಸಲಾಗುತ್ತಿದೆ. ಈ ಕಾಮಗಾರಿಯ ಜೊತೆ ರಸ್ತೆಯನ್ನೂ ನಿರ್ಮಿಸಲಾಗುವುದು. ರೈತರ ಬೇಡಿಕೆಯಂತೆ ರಸ್ತೆ ಮತ್ತು ಹಳ್ಳದ ಪಾತ್ರ ಅತೀಕ್ರಮಣ ತೆರವಿಗೆ ಸಮೀಕ್ಷೆ ನಡೆಸಲಾಗುವುದು. ರೈತರು ಇದಕ್ಕೆ ಸಹಕರಿಸಬೇಕು. ಅಲ್ಲದೇ, ಈ ಬಾಂದಾರ ಹಳ್ಳದ ಹೂಳು ತೆಗೆಯಲಾಗುವುದು. ಹಳ್ಳದ ಪಾತ್ರ ಸ್ವಚ್ಛಗೊಳಿಸಿದರೆ ಒಂದು ಕಿ. ಮೀ. ವರೆಗೆ ನೀರು ಸಂಗ್ರಹವಾಗಲಿದೆ. ಈ ಬ್ಯಾರೇಜಿನಲ್ಲಿ ಏಳು ಅಡಿ ಎತ್ತರದವರೆಗೆ ನೀರು ಸಂಗ್ರಹವಾಗಲಿದೆ ಎಂದು ಸಚಿವರು ಮಾಹಿತಿ ನೀಡಿದರು.

ರಾಜ್ಯದಲ್ಲಿ 200ಕ್ಕೂ ಹೆಚ್ಚು ತಾಲೂಕುಗಳು ಬರಪೀಡಿತವಾಗಿವೆ. ಆದರೆ, ಗುರುಪಾದೇಶ್ವರ ಪುಣ್ಯ, ಶಾಂತವೀರ ಸ್ವಾಮೀಜಿ, ಸಿದ್ದೇಶ್ವರ ಸ್ವಾಮೀಜಿ ಮತ್ತು ಬಿ. ಎಂ. ಪಾಟೀಲ ಪುಣ್ಯದಿಂದ ನಾನು 2013–18ರ ಅವಧಿಯಲ್ಲಿ ಜಲಸಂಪನ್ಮೂಲ ಸಚಿವನಾಗಿ ನೀರಾವರಿ ಮಾಡಿದ್ದೇನೆ. 9 ಸ್ಥಾವರ ಮತ್ತು 1000 ಕಿ. ಮೀ. ಮುಖ್ಯ ಕಾಲುವೆ ಮಾಡಿದ್ದೇನೆ. ಇದ–ರಿಂದಾಗಿ ಈ ಭೀಕರ ಬರದಲ್ಲಿಯೂ ಈ ಭಾಗದಲ್ಲಿ ನೀರಿನ ಸಮಸ್ಯೆ ಇಲ್ಲವಾಗಿದೆ. ನೀರಾವರಿಯಿಂದ ಭೂಮಿಯ ಬೆಲೆ ಹೆಚ್ಚಾಗಿದೆ. ಯಾರೂ ಭೂಮಿ ಮಾರಾಟ ಮಾಡಬೇಡಿ. ಮುಂದೆ ಭೂಮಿ ಸಿಗಲ್ಲ. ರೈತರು ಕೃಷಿ ಉತ್ಪನ್ನಗಳಿಂದ ಉತ್ತಮ ಲಾಭವಾಗುತ್ತಿದೆ ಎಂದು ವ್ಯಸನಗಳಿಗೆ ದಾಸರಾಗಬೇಡಿ ಎಂದು ಅವರು ಕಿವಿಮಾತು ಹೇಳಿದರು.

ಜಿಲ್ಲೆಯಲ್ಲಿ ಅರಣ್ಯ ಪ್ರದೇಶ 0.17% ಮಾತ್ರ ಇತ್ತು. ಕೋಟಿ ವೃಕ್ಷ ಅಭಿಯಾನದ ಬಳಿಕ ಅರಣ್ಯ ಪ್ರಮಾಣ ಹೆಚ್ಚಿದೆ. ನೀವೂ ಕೂಡ ಗಿಡ ಹಚ್ಚಿ ಮಳೆ ಬರಲು ನೆರವಾಗಿ. ಗ್ರಾಮೀಣ ಜನ ಮತ್ತು ರೈತರು ಸುಖವಾಗಿದ್ದರೆ ಎಲ್ಲವೂ ಸಮೃದ್ಧವಾಗಿರುತ್ತದೆ. ನೀರಿನ ಸದುಪಯೋಗ ಪಡಿಸಿಕೊಂಡು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಎಂದು ಎಂ. ಬಿ. ಪಾಟೀಲ ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಿಶ್ವನಾಥ ಪೀರಶೆಟ್ಟಿ, ಈ ಬ್ಯಾರೇಜು ನಿರ್ಮಾಣದಿಂದ 100 ಎಕರೆ ಜಮೀನಿಗೆ ನೇರವಾಗಿ ನೀರಾವರಿ ಸೌಲಭ್ಯ ಸಿಗಲಿದ್ದು, ಸಾವಿರಾರು ಕೊಳವೆ ಭಾವಿಗಳಿಗೆ ಅಂತರ್ಜಲ ಮಟ್ಟ ಹೆಚ್ಚಾಗಲಿದೆ. ಅಷ್ಟೇ ಅಲ್ಲ, 500ಕ್ಕೂ ಹೆಚ್ಚು ತೋಟದ ವಸ್ತಿಗಳ ಜನರಿಗೆ ಸಂಚಾರಕ್ಕೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಈರಗೊಂಡ ಬಿರಾದಾರ, ಜಿ. ಪಂ. ಮಾಜಿ ಅಧ್ಯಕ್ಷ ವಿ. ಎಸ್. ಪಾಟೀಲ, ಮುಖಂಡರಾದ ಬಿ. ಜಿ. ಬಿರಾದಾರ, ಶ್ರೀಶೈಲಗೌಡ ಪಾಟೀಲ ನಿಡೋಣಿ, ಶೇಖಪ್ಪ ಕೊಪ್ಪದ, ಧರ್ಮಣ್ಣ ಬಿಳೂರ, ಮಹೇಶ ಮಲ್ಲಣ್ಣವರ, ಈರಪ್ಪ ಭದ್ರಪ್ಪನವರ, ಕೆ. ಎಚ್. ಮುಂಬಾರೆಡ್ಡಿ, ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ವಿದ್ಯಾರಾಣಿ ತುಂಗಳ, ಗಂಗಾಬಾಯಿ ಕೊಟ್ಯಾಳ, ಸುಜಾತಾ ಜಂಗಮಶೆಟ್ಟಿ, ಮಹೇಶ ಮಾಳಿ, ನಿಂಗನಗೌಡ ಬಿರಾದಾರ, ಎಸ್. ಬಿ. ಶಿರೋಳ, ಸಿ. ಆರ್. ಕೊಟ್ಯಾಳ, ಎಂಜಿನಿಯರ್ ವಿಜಯ ವಸ್ತ್ರದ ಮುಂತಾದವರು ಉಪಸ್ಥಿತ–ರಿದ್ದರು.

ಆನಂದ ಬೂದಿಹಾಳ ವಂದಿಸಿದರು.

## ವೃಕ್ಷತ್ಥಾನ ಹೆರಿಟೇಜ್ ರನ್ ನೋಂದಣಿಗೆ ಡಿ.13ಕೊನೆ ದಿನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಪರಿಸರ ಮತ್ತು ಪ್ರಾಚೀನ ಸ್ಮಾರಕಗಳ ಸಂರಕ್ಷಣೆ ಮತ್ತು ಜಾಗೃತಿ ಮೂಡಿಸಲು ಹಾಗೂ ಶತಮಾನದ ಸಂತ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ಗೌರವಾರ್ಥ ಡಿಸೆಂಬರ್ 24 ರಂದು ನಗರದಲ್ಲಿ ನಡೆಯಲಿರುವ ವೃಕ್ಷತ್ಥಾನ ಹೆರಿಟೇಜ್ ರನ್– 2023 ಗೆ ನೋಂದಣಿ ಮಾಡಲು ಡಿಸೆಂಬರ್ 13 ಕೊನೆಯ ದಿನವಾಗಿದೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ನೋಂದಣಿ ಸಮಿತಿಯ ಡಾ. ಮಲ್ಲಿಕಾರ್ಜುನ ಯಲಗೊಂಡ ಮತ್ತು ವೀರೇಂದ್ರ ಗುಚ್ಚೆಟ್ಟಿ, ಈ ಓಟದಲ್ಲಿ ಪಾಲ್ಗೊಳ್ಳಲು ಈಗಾಗಲೇ ದೇಶದ ನಾನಾ ಭಾಗಗಳಿಂದ ಹಾಗೂ ವಿದೇಶಗಳಿಂದಲೂ ಹಲವಾರು ಜನರು ತಮ್ಮ ಹೆಸರು ನೋಂದಾಯಿಸಿದ್ದಾರೆ. ಮಕ್ಕಳಿಂದ ಹಿಡಿದು, ಹಿರಿಯರು, ಹಿರಿಯ ನಾಗ–ರಿಕರೂ ಕೂಡ ತಮ್ಮ ಹೆಸರುಗಳನ್ನು ನೋಂದಾಯಿಸಿ ಇತರರಿಗೆ ಮಾದ–ರಿಯಾಗಿದ್ದಾರೆ ಎಂದು ತಿಳಿಸಿದ್ದಾರೆ.

ಈಗಾಗಲೇ ವೃಕ್ಷತ್ಥಾನ ಹೆರಿಟೇಜ್ ರನ್– 2023 ಕೋರ್ ಕಮಿಟಿಯ ಪದಾಧಿಕಾರಿಗಳು ಮತ್ತು ನೋಂದಣಿ ಸಮಿತಿಯ ಉಸ್ತುವಾರಿಗಳು ನಾನಾ ಶಾಲೆ ಮತ್ತು ಕಾಲೇಜುಗಳು ಹಾಗೂ ಸಂಘ– ಸಂಸ್ಥೆಗಳನ್ನು ಭೇಟಿ ಮಾಡಿದ್ದು, ಎಲ್ಲರೂ ಉತ್ಸಾಹದಿಂದ ಈ ಓಟದಲ್ಲಿ ಪಾಲ್ಗೊಳ್ಳಲು ನಿರ್ಧ–ರಿಸಿದ್ದಾರೆ. ಅಲ್ಲದೇ, ತಮ್ಮ ಹೆಸರು ನೋಂದಾಯಿಸಿದ್ದಾರೆ.

ಡಿಸೆಂಬರ್ 24 ರಂದು ನಡೆಯಲಿರುವ ಈ ಓಟದ ಎಲ್ಲ ಸಿದ್ಧತೆಗಳು ಭರದಿಂದ ಸಾಗಿದ್ದು, ಆಸಕ್ತರು ಹೆಸರು ನೋಂದಾಯಿಸಲು ಡಿಸೆಂಬರ್ 13 ಕೊನೆಯ ದಿನವಾಗಿದೆ. ಆಸಕ್ತರು ಆನಲೈನ್ ಮೂಲಕ ಃಣಣಠಿ://ಡಿಜರ.ಟಥಿಡಿಚಿಛಿಜುಟಿಜುಚಿ.ಛಿಠಟ/ಒಖಖಿಖ/ಗಿಲೂಖ2023 ಹೆಸರು ನೋಂದಾಯಿಸಬೇಕು ಎಂದು ಡಾ. ಮಲ್ಲಿಕಾರ್ಜುನ ಯಲಗೊಂಡ ಮತ್ತು ವೀರೇಂದ್ರ ಗುಚ್ಚೆಟ್ಟಿ ಮನವಿ ಮಾಡಿದ್ದಾರೆ.

## ಡಿ.13ರಂದು ಪಂಚಮಸಾಲಿ ಸಮಾಜದಿಂದ ಬೃಹತ್ ಧರಣಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಡಿ.13ರಂದು ಬೆಳಿಗ್ಗೆ 10ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನ ಸೌಧದ ಅಧಿವೇಶನದ ಸಂದರ್ಭದಲ್ಲಿ ಗಾಂಧಿ ಭವನದಿಂದ ರ್‍ಯಾಲಿ ಮೂಲಕ ಬೆಳಗಾವಿಯ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಲ್ಲಿ ಪಂಚಮಸಾಲಿ, ಗೌಡ, ಮಲೆಗೌಡ, ದೀಕ್ಷ ಲಿಂಗಾಯತರಿಗೆ 2ಎ ಮೀಸಲಾತಿ ಅನುಷ್ಠಾನ ಹಾಗೂ ಲಿಂಗಾಯತ ಉಪ ಸಮಾಜಗಳಿಗೆ ಒಬಿಸಿ ಮೀಸಲಾತಿಗಾಗಿ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡುವಂತೆ ರಾಜ್ಯ ಸರ್ಕಾರಕ್ಕೆ ಹಕ್ಕೊತ್ತಾಯಿಸಿ, ರಾಜ್ಯ ಸರ್ಕಾರ ತೊರಿಸುತ್ತಿರುವ ನಿರ್ಲಕ್ಷಕ್ಕೆ ಅಸಮಾಧಾನಗೊಂಡು ಕೂಡಲಸಂಗಮ ಗುರುಪೀಠದ ಪ್ರಥಮ ಜಗದ್ಗುರು ಬಸವಜಯ ಮೃತ್ಯುಂ–ಜಯ ಸ್ವಾಮೀಜಿ ಅವರ ನೇತೃತ್ವದಲ್ಲಿ ಬೃಹತ್ ಧರಣಿ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದ್ದು, ಕಾರಣ ಸಿಂದಗಿ ತಾಲೂಕಿನ ಪಂಚಮಸಾಲಿ ಸಮಾಜದ ಬಂಧುಗಳು ಸ್ವಯಂ ಪ್ರೇ–ರಿತರಾಗಿ ಮೀಸಲಾತಿ ಹೋರಾಟದಲ್ಲಿ ಭಾಗವಹಿಸುವಂತೆ ಸಮಾಜದ ಅಧ್ಯಕ್ಷ ಎಂ.ಎಂ.ಹಂಗರಗಿ, ಕಾರ್ಯದರ್ಶಿ ಆನಂದ ಶಾಬಾದಿ ಹಾಗೂ ಮೀಸಲಾತಿ ಹೋರಾಟ ಸಮಿತಿ ಗೌರವಾಧ್ಯಕ್ಷ ಚಂದ್ರಶೇಖರ ನಾಗರಬೆಟ್ಟ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೃತ್ತಿ ನೈಪುಣ್ಯತೆ ಹೆಚ್ಚಿಸುವ ತರಬೇತಿಗಳು :ಡಾ.ಜಯರಾಜ

**ಉದಯರಶ್ಮಿ ನ್ಯೂಸ್**

ವಿಜಯಪುರ: ತರಬೇತಿಗಳು ವೃತ್ತಿ ನೈಪುಣ್ಯತೆಯನ್ನು ಹೆಚ್ಚಿಸುತ್ತವೆ ಎಂದು ಬಿ ಎಲ್ ಡಿ ಇ ಡಿಮ್ಡ್ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ ಹೇಳಿದ್ದಾರೆ.

ನಗರದ ಬಿ ಎಲ್ ಡಿಇ ವೈದ್ಯಕೀಯ ಕಾಲೇಜಿನ ಸಭಾಂಗಣದಲ್ಲಿ ರಾಜ್ಯ ಮಟ್ಟದ 38ನೇ ರೇಡಿಯೋಲಜಿ–ಐ ಆರ್ ಐ ಎ ಮೂರು ದಿನಗಳ ಸಮ್ಮೇಳನ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದ ಕೊನೆಯ ದಿನವಾದ ರವಿವಾರ ಮತ್ತು ದೇಶದಲ್ಲಿಯೇ ಇದೇ ಮೊದಲ ಬಾರಿಗೆ ಇಂಥ ಸಮ್ಮೇಳನದಲ್ಲಿ ರೇಡಿಯೋಲಜಿ ಟೆಕ್ನಿಷಿಯನ್(ತಂತ್ರಜ್ಞರು)ಗಳಿಗಾಗಿ ಆಯೋಜಿಸಲಾದ ವಿಶೇಷ ವೈಜ್ಞಾನಿಕ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವನ್ನು ಡಿಜಿಟಲ್ ಲ್ಯಾಂಪ್ ಹಚ್ಚುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.



ರೇಡಿಯೋಗ್ರಾಫರ್ ಗಳನ್ನು ಟೆಕ್ನೋಗ್ರಾಫರ್ ಎಂದು ಶ್ಲಾಘಿಸಿದ ಅವರು, ಇಂಥ ಕೌಶಲ್ಯಾಭಿವೃದ್ಧಿ ತರಬೇತಿಗಳಲ್ಲಿ ಪಾಲ್ಗೊಳ್ಳುವುದ–ರಿಂದ ವಿಶ್ವದಲ್ಲಿ ಬದಲಾಗುತ್ತಿರುವ ಸಂಶೋಧನೆ ವಿಧಾನಗಳು ಮತ್ತು ತಂತ್ರಜ್ಞಾನದ ಬಗ್ಗೆ ಅಧ್ಯಯನ ನಡೆಸಲು ಮತ್ತು ಹೊಸ ಹೊಸ ಆವಿಷ್ಕಾರಗಳನ್ನು ಅಳವಡಿಸಿಕೊಂಡು ಸೇವಾ ನೈಪುಣ್ಯತೆ ಹೆಚ್ಚಿಸಿಕೊಳ್ಳಲು ಅನುಕೂಲವಾಗಲಿದೆ. ಮುಂದೆಯೂ ವಿವಿಯಿಂದ ಇಂಥ ತರಬೇತಿ ಕಾರ್ಯಕ್ರಮಗಳಿಗೆ ಸಂಪೂರ್ಣ ಸಹಕಾರ ಮತ್ತು ಪ್ರೋತ್ಸಾಹ ನೀಡುವುದಾಗಿ ಅವರು ತಿಳಿಸಿದರು.

ಅಲೈಡ್ ಸೈನ್ಸ್ ಡೀನ್ ಡಾ. ಎಸ್. ವಿ. ಪಾಟೀಲ್ ಮಾತನಾಡಿ, ವೈಜ್ಞಾನಿಕ ತರಬೇತಿ ಕಾರ್ಯಕ್ರಮದ ಮಹತ್ವವನ್ನು ವಿವರಿಸಿದರು. ಈ ಶಿಬಿರದಲ್ಲಿ ನೀಡಲಾದ ತರಬೇತಿಯನ್ನು ಸದುಪಯೋಗ ಪಡಿಸಿಕೊಂಡು ದಿನನಿತ್ಯದ ಕೆಲಸದಲ್ಲಿ ಕೌಶಲ್ಯ ಅಭಿವೃದ್ಧಿ ಹೊಂದುವಂತೆ ಕರೆ ನೀಡಿದರು.

ರೇಡಿಯೋಲಜಿ ವಿಭಾಗದ ಮುಖ್ಯಸ್ಥ ಡಾ. ರಾಜಶೇಖರ ಮುಚ್ಚಂಡಿ ಸ್ವಾಗತಿಸಿದರು. ಡಾ. ಸುಧೀರ್ ಕಾಳೆ, ಡಾ. ಕಿಶನ ಭಾಗವತ, ಡಾ. ಮಂಜುನಾಥ ಅಬ್ಬಿಗೇರಿ, ಡಾ. ನಾಗೇಶ, ಡಾ. ರುದ್ರೇಶ ವಿಶೇಷ ಉಪನ್ಯಾಸ ನೀಡಿದರು.

ಈ ಕಾರ್ಯಕ್ರಮದಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳಿಂದ ಆಗಮಿಸಿದ್ದ 200ಕ್ಕೂ ಹೆಚ್ಚು ಟೆಕ್ನಿಷಿಯನ್ ಗಳು ಭಾಗವಹಿಸಿ ತರಬೇತಿ ಪಡೆದುಕೊಂಡರು.

ಈ ಕಾರ್ಯಕ್ರಮದಲ್ಲಿ ಸಮಾಜ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಅಪಾರ ಸೇವೆಯನ್ನು ಪರಿಗಣಿಸಿ ಸುನಂದ ವಾಸುದೇವ ತೋಳಬಂದಿ ಅವರನ್ನು ಅಭಿನಂದಿಸಲಾಯಿತು.

ಡಾ. ಸುರೇಶ ಕನಮಡಿ ವಂದಿಸಿದರು.

### ನಿವಾಳಖೇಡದಲ್ಲಿ ಶ್ರೀ ಸಿದ್ದಕೃಪಾ ಮಲ್ಲಿಕಾರ್ಜುನ ಮಹಾ ಮಠದ ಉದ್ಘಾಟನೆ

## ಉದಾತ್ತ ಯೋಚನೆಗಳಿಂದ ಜೀವನ ಪಾವನಗೊಳಿಸಿಕೊಳ್ಳಿ :ಸುಣಗಾರ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಪುರಾಣ, ಪ್ರವಚನ, ಧರ್ಮಸಭೆಗಳಿಗೆ ಗ್ರಾಮಗಳಲ್ಲಿನ ಮಠಮಾನ್ಯಗಳು ಉತ್ತಮ ವೇದಿಕೆಯಾಗಿವೆ ಎಂದು ದೇವರಹಿಪ್ಪರಗಿ ಗದ್ದುಗೆಮಠದ ಮಡಿವಾಳೇಶ್ವರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ನಿವಾಳಖೇಡ ಗ್ರಾಮದಲ್ಲಿ ಶುಕ್ರವಾರ ನೂತನ ಶ್ರೀ ಸಿದ್ದಕೃಪಾ ಮಲ್ಲಿಕಾರ್ಜುನ ಮಹಾ ಮಠದ ಉದ್ಘಾಟನಾ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದರು. ಗ್ರಾಮಗಳಲ್ಲಿ ಹಿಂದಿನಿಂದಲೂ ಮಠಗಳು ಆಧ್ಯಾತ್ಮಿಕ ಚಿಂತನೆಗಳ ಕೇಂದ್ರಗಳಾಗಿವೆ. ಇಂದು ಇಲ್ಲಿ ಆಧ–್ಯಾತ್ಮಿಕ ತಾಣಕ್ಕೆ ಚಾಲನೆ ನೀಡುತ್ತಿರುವುದು ಅತ್ಯಂತ ಸಮಯೋಚಿತ ಎಂದರು.




ಮಾಜಿ ಶಾಸಕ ಶರಣಪ್ಪ ಸುಣಗಾರ ಮಾತನಾಡಿ, ಧಾರ್ಮಿಕ ಚಿಂತನೆಗಳ ಮೂಲಕದ ನಮ್ಮತನ ಉಳಿಸಿಕೊಳ್ಳಬೇಕು. ಸಂತರು, ಶರಣರು, ಮಹಾಂತರ ಉದಾತ್ತ ಯೋಚನೆಗಳ ಮೂಲಕ ನಮ್ಮ ಜೀವನ ಪಾವನಗೊಳಿಸಿಕೊಳ್ಳಬೇಕು ಎಂದರು.

ವಿಜಯಪುರದ ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ ಡಾ. ಪ್ರಭುಗೌಡ ಲಿಂಗದಳ್ಳಿ ಮಾತನಾಡಿ, ಆಧ–್ಯಾತ್ಮಿಕ ಬದುಕು ಉತ್ತಮ ಜೀವನ ರೂಪಿಸಿಕೊಡಲು ಸಹಕಾರಿಯಾಗಿದೆ. ನಾವೆಲ್ಲ ಶ್ರೀಗಳ ತತ್ವಾದರ್ಶಗಳನ್ನು ಅಳವಡಿಸಿಕೊಂಡು ಜೀವನ ಪಾವನಗೊಳಿಸಿಕೊಳ್ಳೋಣ ಎಂದರು.

ದೇವರಹಿಪ್ಪರಗಿ ಪ್ರಗತಿ ಪಟ್ಟಣ ಸಹಕಾರಿ ಬ್ಯಾಂಕಿನ ಅಧ್ಯಕ್ಷ ವೈ.ಬಿ.ಪಾಟೀಲ, ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಸುರೇಶ ಶೆಡಶ್ಯಾಳ ಮಾತನಾಡಿ, ವಿಜಯಪುರ ಜ್ಞಾನಯೋಗಾಶ್ರಮದ ಸಿದ್ದೇಶ್ವರ ಸ್ವಾಮೀಜಿಗಳ ಆಶೀರ್ವಾದದಿಂದ ಈ ಗ್ರಾಮದಲ್ಲಿ ಆಧ್ಯಾತ್ಮಿಕವಾಗಿ ಶ್ರೀಮಠ ಬೆಳೆಯಲಿ ಎಂದರು.

ಬೆಳ್ಳೆರಿ ಶಿವಾನಂದಮಠದ ಬಸವಾನಂದ ಸ್ವಾಮೀಜಿ ನೇತೃತ್ವ ವಹಿಸಿದ್ದರು. ಹರನಾಳ ಬಸವಾನಂದ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ಮನಗೂಳಿ ವಿರಕ್ತಮಠದ ವಿರತೇಶಾನಂದ ಸ್ವಾಮೀಜಿ, ಮುಳಸಾವಳಗಿ ಅಮೋಘಸಿದ್ದ ಮಠದ ನಿಂಗರಾಯ, ಚಿಕ್ಕರೂಗಿ ಈರಣ್ಣಶಾಸ್ತ್ರಿ ಸೇರಿದಂತೆ ಹಲವರು ವೇದಿಕೆಯಲ್ಲಿದ್ದರು.

ಜ್ಞಾನಯೋಗಾಶ್ರಮದ ಸ್ವಾಮೀಜಿ ಹಾಗೂ ಬಾಲಗಾಂವ ಗುರುದೇವಾಶ್ರಮದ ಡಾ.ಅಮೃತಾನಂದ ಸ್ವಾಮೀಜಿ ಪ್ರವಚನ ನೀಡಿದರು. ಸಂಘಟಕರಾದ ಶ್ರೀಮಂತ ತಳವಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮಕ್ಕಳ ಸಾಹಿತಿ ಫ.ಗು.ಸಿದ್ದಾಪುರ ಅವರನ್ನು ಸನ್ಮಾನಿಸಲಾಯಿತು.

ಬಿಜೆಪಿ ಮುಖಂಡ ಸುರೇಶಗೌಡ ಪಾಟೀಲ(ಸಾಸನೂರ), ರಮೇಶ ಮಸಬಿನಾಳ, ಚನ್ನಪ್ಪ ಕಾರಜೋಳ, ಶರಣಗೌಡ ಪಾಟೀಲ, ಸಂಗನಗೌಡ ಬಿರಾದಾರ, ಸಾಹೇಬಗೌಡ ರೆಡ್ಡಿ, ಅಪ್ಪುಗೌಡ ಪಾಟೀಲ, ಮಲ್ಲಿಕಾರ್ಜುನ ಮಠ, ಆರ್. ಆರ್.ಮೂಲಿಮನಿ, ಪ್ರಕಾಶ ಗುಡಿಮನಿ, ಸರಿತಾ ನಾಯಕ, ಪ್ರಕಾಶ ಮಲ್ಲಾರಿ ಸೇರಿದಂತೆ ನಿವಾಳಖೇಡ ಗ್ರಾಮದ ಭಕ್ತಾಧಿಗಳು ಪಾಲ್ಗೊಂಡಿದ್ದರು.

## ಹಂದಿಗಳ ಸಾವು: ಆತಂಕದಲ್ಲಿ ಜನತೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದಲ್ಲಿ ಕಳೆದ ಹಲವಾರು ದಿನಗಳಿಂದ ಹಂದಿಗಳು ಕಾಯಿಲೆಯಿಂದಾಗಿ ಸಾವಿಗೀಡಾಗುತ್ತಿರುವದರಿಂದಾಗಿ ಪುರಸಭೆಯ ಎಲ್ಲ ವಾರ್ಡ್ಗಳಲ್ಲಿರುವ ಜನರಿಗೆ ಅವುಗಳ ವಾಸನೆಯಿಂದ ಇರಲು ಸಾಧ್ಯವಾಗುತ್ತಿಲ್ಲ. ಹಂದಿಗಳ ಸಾವಿನಿಂದ ಮಕ್ಕಳು ಸೇರಿದಂತೆ ಜನರ ಆರೋಗ್ಯದಲ್ಲಿ ಏರುಪೇರಾಗುತ್ತಿರುವದು ಜನರಲ್ಲಿ ಆತಂಕ ಮನೆ ಮಾಡಿದೆ. ಹಂದಿಗಳಿಗೆ ಮಾರಣಾಂತಿ–ಕ ಕಾಯಿಲೆ ಬಂದಿರುವದರಿಂದ ಹಂದಿಗಳ ಮಾಲೀಕರು ಅವುಗಳಿಗೆ ಔಷಧೋಪಚಾರ ಮಾಡುವ ಕಡೆಗೆ ಗಮನ ಹರಿಸಬೇಕು. ದಿನಕ್ಕೆ ಸುಮಾರು 10–15 ಹಂದಿಗಳು ಸಾವಿಗೀಡಾಗುತ್ತಿವೆ. ಹಂದಿಗಳು ಸಾಯುತ್ತಿರುವದರಿಂದ ಅವುಗಳು ಕೊಳೆತು ನಾರುತ್ತಿವೆ. ಇದರಿಂದಾಗಿ ಸೊಳ್ಳೆಗಳ ಕಾಟ ಹೆಚ್ಚಾಗುತ್ತಿವೆ. ಇದರ ಪರಿಣಾಮ ಮಕ್ಕಳ ಮೇಲೆ ಪರಿಣಾಮ ಬೀರಿ ಮಕ್ಕಳು ಜ್ವರ ಸೇರಿದಂತೆ ವಿವಿಧ ಕಾಯಿಲೆಗಳಿಂದ ಬಾಧೆ ಪಡುತ್ತಿದ್ದಾರೆ. ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ, ಮಲೇರಿಯಾದಂತಹ ಮಾರಣಾಂತಿಕ ಕಾಯಿಲೆಗಳು ಬರುವ ಸಾಧ್ಯತೆಯಿದೆ. ಕೂಡಲೇ ಸಂಬಂಧಿಸಿದ ಅಧಿಕಾ–ರಿಗಳು ಹಂದಿಗಳ ಸಾವಿಗೆ ಕಡಿವಾಣ ಹಾಕುವ ಅಗತ್ಯವಿದೆ. ಹಂದಿಗಳ ಸಾವಿನ ಪ್ರಮಾಣ ಹೆಚ್ಚಾಗುತ್ತಿದ್ದಂತೆ ಈಚೆಗೆ ಮಕ್ಕಳ ಆಸ್ಪತ್ರೆಯಲ್ಲಿ ದಿನವೂ ಅನೇಕ ಮಕ್ಕಳು ಚಿಕಿತ್ಸೆ ಬರುವುದು ಕಂಡುಬರುತ್ತಿದೆ. ಪಶು ಇಲಾಖೆಯ ಅಧಿಕಾರಿಗಳು ಹಂದಿಗಳ ಮಾಲೀಕ–ರಿಗೆ ಔಷಧ ನೀಡಿದ್ದೇವೆ ಎಂದು ಹೇಳುತ್ತಾರೆ. ಆದರೆ ಹಂದಿಗಳ ಮಾಲೀಕರು ಅದನ್ನು ನೀಡಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.



ಪಶು ಇಲಾಖೆಯ ಅಧಿಕಾರಿಗಳು ಇದರ ಕಡೆಗೆ ಹೆಚ್ಚು ಗಮನ ಹರಿಸಿ ಹಂದಿಗಳ ಕಾಯಿಲೆಗೆ ಕಡಿವಾಣ ಹಾಕಬೇಕು. ಪುರಸಭೆ ಅಧಿಕಾ–ರಿಗಳು ಎಲ್ಲ ವಾರ್ಡ್ಗಳಲ್ಲಿ ಸತ್ತಿರುವ ಹಂದಿಗಳನ್ನು ಬೇಗನೆ ಸಾಗಿಸುವ ಕ್ರಮ ತೆಗೆದುಕೊಳ್ಳಬೇಕು. ಎಲ್ಲ ವಾರ್ಡ್ಗಳಲ್ಲಿ ಫಾಂಗಿಂಗ್ ಮಾಡುವ ಜೊತೆಗೆ ರಾಸಾಯನಿಕ ಸಿಂಪಡಣೆ ಮಾಡಬೇಕು. ಹಂದಿಗಳ ಸಾವಿನ ಪ್ರಮಾಣ ಕಡಿಮೆ ಮಾಡದೇ ಹೋದರೆ ಮುಂದಿನ ದಿನಗಳಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯಿಂದ ಹೋರಾಟ ಮಾಡಬೇಕಾಗುತ್ತದೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಯುವ ಘಟಕದ ಅಧ್ಯಕ್ಷ ಅಶೋಕ ಹಾ–ರಿವಾಳ ಪ್ರಕಟಣೆ ಮೂಲಕ ಎಚ್ಚರಿಕೆ ನೀಡಿದ್ದಾರೆ.

## ರೈತರಿಗೆ ನ್ಯಾಯಯುತ ವಿದ್ಯುತ್ ಸಂಪರ್ಕ ಕಲ್ಪಿಸಿ : ಕೆಂಗನಾಳ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದಲ್ಲಿ ಅಖಂಡ 188 ದಿನದ ಹೋರಾಟದ ಫಲವಾಗಿ ಬಸವನಬಾಗೇವಾಡಿ ವಿದ್ಯುತ್ ವಿಭಾಗೀಯ ಕಚೇರಿ ದಿ.12.12.2012 ರಂದು ಆದ–ೇಶ ಸಿಕ್ಕಿತು. ಇದರಿಂದಾಗಿ 297 ಗ್ರಾಮಗಳ ಜನರು ವಿಜಯಪುರಕ್ಕೆ ಹೋಗಿ ಬರುವುದನ್ನು ತಪ್ಪಿಸಿದಂತಾಗಿದೆ. ಇಂದಿಗೆ ಈ ಕಚೇರಿಯು ಹತ್ತು ವರ್ಷದ ಹಿಂದೆ ಆದೇಶದೊಂದಿಗೆ ಆರಂಭವಾಗಿ ಇಂದಿಗೆ ಹನ್ನೊಂದು ವರ್ಷಕ್ಕೆ ಕಾಲಿಡುತ್ತಿದ್ದರೂ ಜನರಿಗೆ ಈ ಕಚೇರಿಯ ಸೌಲಭ್ಯಗಳು ಸರಿಯಾಗಿ ಜನರಿಗೆ ಸಿಗುತ್ತಿಲ್ಲ ಎಂದು ರೈತಪರ, ಜನಪರ ಸಾಮಾಜಿಕ ಹೋರಾಟಗಾರ ಮಲ್ಲಿಕಾರ್ಜುನ ಕೆಂಗನಾಳ ಹೇಳಿದರು.

ಸೋಮವಾರ ದೂರವಾಣಿ ಮೂಲಕ ಮಾತನಾಡಿದ ಅವರು, ಪಟ್ಟಣದಲ್ಲಿ ವಿದ್ಯುತ್ ವಿಭಾಗೀಯ ಕಚೇರಿ ಇಲ್ಲದ ಪರಿಣಾಮವಾಗಿ ಜನರು ಜಿಲ್ಲಾ ಕೇಂದ್ರ ವಿಜಯಪುರಕ್ಕೆ ತಮ್ಮ ಕೆಲಸಗಳಿಗಾಗಿ ಅಲೆದಾಡುವ ಪರಿಸ್ಥಿತಿಯಿತ್ತು. ಅಲ್ಲದೇ ದೂರದ ತಾಳಿಕೋಟಿ, ಮುದ್ದೇಬಿಹಾಳ, ನಿಡಗುಂದಿ, ಕೊಲ್ಹಾರ ತಾಲೂಕಿನ ಸೇರಿದಂತೆ ಇದರ ವ್ಯಾಪ್ತಿಯಲ್ಲಿ ಬರುವ ಗ್ರಾಮದ ಜನರು ವಿದ್ಯುತ್ ಕೆಲಸಗಳಿಗಾಗಿ ವಿಜಯಪುರದಲ್ಲಿರುವ ವಿಭಾಗೀಯ ಕಚೇ–ರಿಗೆ ಹೋಗುವ ಪರಿಸ್ಥಿತಿಯಿತ್ತು. ಜನರ ಅಲೆದಾಡುವದನ್ನು ಮನಗಂಡು ಅವರ ಕೆಲಸಗಳು ಸುಲಭವಾಗಿ ಬೇಗನೇ ಆಗುವ ಉದ್ದೇಶದಿಂದ ಹೆಸ್ಕಾಂ ಇಲಾಖೆಯು ಬಸವನಬಾಗೇವಾಡಿಯಲ್ಲಿ ವಿದ್ಯುತ್ ವಿಭಾಗೀಯ ಕಚೇರಿ ಆರಂಭಿಸುವಂತೆ ಆಗ್ರಹಿಸಿ 188 ದಿನಗಳ ಕಾಲ ಹೋರಾಟ ಮಾಡಿದ ಫಲವಾಗಿ ಇಲಾಖೆಯು ಕಚೇರಿ ಸ್ಥಾಪನೆಗೆ ಆದೇಶ ನೀಡಿತು.



ಜನರಿಗೆ ತುಂಬಾ ಅನುಕೂಲವಾಗಲಿ ಎಂಬ ಉದ್ದೇಶದಿಂದ ನಾನು ನಿರಂತರವಾಗಿ ಹೋರಾಟ ಮಾಡಿದ ಫಲವಾಗಿ ಕಚೇರಿ ಆರಂಭವಾಗಿ ಹನ್ನೊಂದು ವರ್ಷ ಗತಿಸಿದರೂ ಇಂಧನ ಇಲಾಖೆಯ ಸಚಿವರು, ಜನಪ್ರತಿನಿಧಿಗಳ, ಅಧಿಕಾರಿಗಳ ಬೇಜಬ್ದಾರಿಯಿಂದ ರೈತರಿಗೆ ಸಿಗಬೇಕಾದ ಮೂಲ ಸೌಕರ್ಯಗಳನ್ನು ಸರಿಯಾಗಿ ಸಿಗುತ್ತಿಲ್ಲ. ರೈತರು ಅಕ್ರಮ–ಸಕ್ರಮ ಯೋಜನೆಯಲ್ಲಿ ಹಣ ತುಂಬಿದರೂ ಇದುವರೆಗೂ ಸರಿಯಾಗಿ ಮೂಲಭೂತ ಸೌಲಭ್ಯ ಸಿಕ್ಕಿಲ್ಲ. ಹಿರಿಯ ಅಧಿಕಾರಿಗಳ ನಿರ್ಲಕ್ಷ್ಯತನ ಎದ್ದು ಕಾಣುತ್ತಿದೆ. ಇದರಿಂದಾಗಿ ಇಲಾಖೆಗೆ ಸಾಕಷ್ಟು ನಷ್ಟ ಅನುಭವಿಸುವಂತಾಗಿದೆ. ಹಲವಾರು ಅಧಿಕಾ–ರಿಗಳು ಸ್ಥಾನಿಕ ಸ್ಥಳದಲ್ಲಿ ಇರದೇ ಬೇರೆಡೆಯಿಂದ ಬಂದು ಹೋಗುವದರಿಂದಾಗಿ ರೈತರಿಗೆ, ಜನ–ರಿಗೆ ಬಹಳ ಅನಾನೂಕೂಲತೆಯಾಗುತ್ತಿದೆ. ಇಲಾಖೆಯ ಸಿಬ್ಬಂದಿಗಳು ಸಹ ರೈತರಿಗೆ, ಜನರಿಗೆ ಸರಿಯಾದ ಸಮಯಕ್ಕೆ ಸಿಗುತ್ತಿಲ್ಲ. ಇದರಿಂದಾಗಿ ಅವರ ಕೆಲಸಗಳು ನೆನೆಗುದಿಗೆ ಬೀಳುತ್ತಿವೆ. ಕೂಡಲೇ ಇಂಧನ ಸಚಿವರು, ಅಧಿಕಾರಿಗಳು ಇದರ ಕಡೆಗೆ ಗಮನ ಹ–ರಿಸಬೇಕಿದೆ ಎಂದ ಅವರು, ಈಚೆಗೆ 22.09.2023 ರಂದು ಸಚಿವ ಸಂಪುಟದಲ್ಲಿ ತೆಗೆದುಕೊಂಡ ತೀರ್ಮಾನದನ್ವಯ ರೈತರಿಗೆ ಸಿಗಬೇಕಾದ ಯೋಜನೆಗಳನ್ನು ಸ್ಥಗಿತಗೊಳಿಸಲಾಗಿದೆ. ಇದರಿಂದಾಗಿ ರೈತರು ಕಂಗಾಲಾಗಿದ್ದಾರೆ. ಕೂಡಲೇ ರೈತರಿಗೆ ನ್ಯಾಯಯುತ ವಿದ್ಯುತ್ ಸಂಪರ್ಕವನ್ನು ಕಲ್ಪಿಸಿ ನ್ಯಾಯ ಒದಗಿಸಬೇಕು. ಈ ಕುರಿತು ಬೆಳಗಾವಿಯ ಅಧಿವೇಶನದಲ್ಲಿ ತೀರ್ಮಾನ ಕೈಗೊಳ್ಳಬೇಕೆಂದು ಆಗ್ರಹಿಸಿದರು.

# ಸಂತ ಜ್ಞಾನೇಶ್ವರರ ಮಹಾರಾಜರ ಉತ್ಸವ

ಉದಯರಶ್ಮಿ ನ್ಯೂಸ್



ಬಸವನಬಾಗೇವಾಡಿ: ತಾಲೂಕಿನ ಮನಗೂಳಿ ಪಟ್ಟಣದಲ್ಲಿ ಸಂತ ಜ್ಞಾನೇಶ್ವರರ ಮಹಾರಾಜರ ಉತ್ಸವದ ಅಂಗವಾಗಿ ನಾಲ್ಕು ದಿನಗಳವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾ ಭಕ್ತಿಯಿಂದ ಜರುಗಿದವು.

ಪಟ್ಟಣದ ವಿಠಲ ಮಂದಿರದಲ್ಲಿ ಶುಕ್ರವಾರ ಸಂಜೆ ಭಜನೆಯೊಂದಿಗೆ ಪೋಥಿ ಸ್ಥಾಪನಾ ಕಾರ್ಯಕ್ರಮ ನಡೆಯಿತು. ಶನಿವಾರ ಬೆಳಿಗ್ಗೆ ಪಾರಾಯಣ, ಸಂಜೆ ಪ್ರವಚನ, ರಾತ್ರಿ ಕೀರ್ತನೆ ಹಾಗೂ ಭಜನೆಯೊಂದಿಗೆ ಜಾಗರಣೆ ಕಾರ್ಯಕ್ರಮದಲ್ಲಿ ಭಕ್ತರು ಶ್ರದ್ಧಾ ಭಕ್ತಿಯಿಂದ ಪಾಲ್ಗೊಂಡಿದ್ದರು. ಭಾನುವಾರ ಬೆಳಿಗ್ಗೆ ದೇವಸ್ಥಾನದಲ್ಲಿ ಹರಿಪಾಠ ನಡೆಯಿತು. ಸಂಜೆ ಭಕ್ತರ ಭಜನೆಯೊಂದಿಗೆ ಪಲ್ಲಕ್ಕಿ ಉತ್ಸವವು ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಡೆಯಿತು. ಸೋಮವಾರ ಬೆಳಿಗ್ಗೆ ಕಾಲಾಕೀರ್ತನ ಕಾರ್ಯಕ್ರಮದ ನಂತರ ಭಕ್ತರು ಪ್ರಸಾದ ಸ್ವೀಕರಿಸಿದರು.

ಭಾನುವಾರ ಜರುಗಿದ ಪಲ್ಲಕ್ಕಿ ಉತ್ಸವದಲ್ಲಿ ಮುಖಂಡರಾದ ಅಪ್ಪುಗೌಡ ಪಾಟೀಲ, ಸುಭಾಸಗೌಡ ಪಾಟೀಲ, ಬಾಬು ಅರಳೆಪ್ಪನವರ, ಶಿವಾಜಿ ಘೋರ್ಪಡೆ, ಸಂಭಾಜಿ ನಲವಡೆ, ಜೋತಿಬಾ ನಾಮನೆ, ಪಾಂಡುಗ ಬನಸೋಡೆ, ಯಲ್ಲಪ್ಪ ರೊಳ್ಳಿ, ರಾಜು ಬಣಕರ, ವಿಶ್ವನಾಥ ಗುಂಡ, ಪುಂಡಲೀಕ ಮಾಳಿ, ಬಸವರಾಜ ಚಿಮ್ಮಲಗಿ, ಮುರಳಿ ನುಲೇನ್ನವರ, ಶಿವಾಜಿ ಮೋರೆ ಇತರರು ಇದ್ದರು.

### ಜಯಶ್ರೀ ಅಬ್ಬಿಗೇರಿ ಮತ್ತು ಜಯಪ್ರಕಾಶ ಅಬ್ಬಿಗೇರಿ ದಂಪತಿಯ 15 ಕೃತಿಗಳ ಲೋಕಾರ್ಪಣೆ

# ಸಾಹಿತ್ಯ ಕ್ಷೇತ್ರಕ್ಕೆ ಅಬ್ಬಿಗೇರಿ ದಂಪತಿ ಸೇವೆ ಅನನ್ಯ :ಗವಿಮಠ

ಉದಯರಶ್ಮಿ ನ್ಯೂಸ್



ಬೆಳಗಾವಿ: ಅಬ್ಬಿಗೇರಿ ದಂಪತಿಗಳು ಸಾಹಿತ್ಯ ಕ್ಷೇತ್ರಕ್ಕೆ ಸಲ್ಲಿಸುತ್ತಿರುವ ಸೇವೆ ಅನನ್ಯ. ಈ ಸೇವೆ ನಿತ್ಯ ನಿರಂತರವಾಗಿರಲಿ ಎಂದು ಬೆಳಗಾವಿ ಜಿಲ್ಲಾ ವಿಶ್ರಾಂತ ಪ್ರಾಚಾರ್ಯ, ಹಿರಿಯ ಸಾಹಿತಿ ಬಿ. ಎಸ್ ಗವಿಮಠ ಅವರು ಹೇಳಿದರು.

ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಭಾನುವಾರ ಜಿಲ್ಲಾ ಲೇಖಕಿಯರ ಸಂಘ ಬೆಳಗಾವಿ ಹಾಗೂ ಲೋಕವಿದ್ಯಾ ಪ್ರಕಾಶನ ಸಂಕೇಶ್ವರ ಇವರ ಸಂಯುಕ್ತ ಆಶ್ರಯದಲ್ಲಿ ಉಪನ್ಯಾಸಕಿ,ಲೇಖಕಿ, ಅಂಕಣಕಾರ್ತಿ, ಚಿಂತಕಿ, ವಾಗ್ಮಿ ಜಯಶ್ರೀ ಮತ್ತು ಜಯಪ್ರಕಾಶ ಅಬ್ಬಿಗೇರಿ ದಂಪತಿಗಳ 15 ಕೃತಿಗಳ ಲೋಕಾರ್ಪಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಮಾನಗಳಲ್ಲಿ ಸಾಹಿತ್ಯ ಓದುಗರ ಸಂಖ್ಯೆ ತುಂಬಾ ಕ್ಷೀಣಿಸಿದೆ. ಇಂತಹ ಸಮಯದಲ್ಲಿ ವೃತ್ತಿ ಬದುಕಿನೊಂದಿಗೆ ಸಾಹಿತ್ಯ ಕೃತಿಗಳನ್ನು ರಚಿಸಿ ಪ್ರಕಟಿಸುವುದು ತುಂಬಾ ಅಭಿನಂದನಾರ್ಹ ಕಾರ್ಯವಾಗಿದೆ. ಈ ಕಾರ್ಯಕ್ರಮದಲ್ಲಿ 15 ಕೃತಿಗಳು ಬಿಡುಗಡೆಯಾಗಿದ್ದು, ಇದೊಂದು ಐತಿಹಾಸಿಕ ಕಾರ್ಯಕ್ರಮವಾಗಿದೆ. ಇಷ್ಟೊಂದು ಕೃತಿಗಳು ಬಿಡುಗಡೆಯಾಗಿದ್ದು ಅಭಿಮಾನದ ಸಂಗತಿ ಎಂದರು.

ಕೃತಿ ಪರಿಚಯ ಮಾಡಿದ ಇಂಗ್ಲಿಷ್ ಅಧ್ಯಾಪಕಿ ಗುರುದೇವಿ ಹುಲೆಪ್ಪನವರಮಠ, ಜಯಶ್ರೀ ಅಬ್ಬಿಗೇರಿ ಅವರ ಕೃತಿಗಳಲ್ಲಿ ಒಂದು ಚೈತನ್ಯ ತುಂಬುವ ಶಕ್ತಿ ಇದೆ. ಕೈಲಾಗದೇ ನನಗೆ ಏನನ್ನೂ ಮಾಡಲು ಸಾಧ್ಯವೇ ಇಲ್ಲ ಎಂದು ಕುಳಿತಿರುವ ಅದೆಷ್ಟೋ ಜನರಿಗೆ ಸ್ಫೂರ್ತಿ ತುಂಬುವ ತಾಕತ್ತು ಅಬ್ಬಿಗೇರಿ ಅವರ ಕೃತಿಗಳಲ್ಲಿ ಅಡಗಿದೆ. ಕನಸನ್ನೇ ಕಾಣದೇ ಇರುವವರಿಗೆ ಕನಸು ಕಾಣಿಸಿ, ಆ ಕನಸುಗಳ ಕನಸು ಮಾಡಲು ಏನು ಮಾಡಬೇಕು ಎಂಬುವುದನ್ನು ಅದ್ಭುತವಾಗಿ ಬರೆದಿದ್ದಾರೆ. ಅಷ್ಟೇ ಅಲ್ಲದೇ ಜೀವನ ಪ್ರಸಂಗಗಳನ್ನು ದೃಷ್ಟಾಂತಗಳ ಮೂಲಕ ಕಟ್ಟಿಕೊಟ್ಟಿದ್ದಾರೆ. ಹೀಗಾಗಿ ಯುವ ಮನಸುಗಳ ಪರಿವರ್ತನೆಗೆ ಈ ಪುಸ್ತಕಗಳು ಸಹಕಾರಿ. ಹಾಗಾಗಿ ಈ ಪುಸ್ತಕಗಳನ್ನು ಅಬ್ಬಿಗೇರಿ ದಂಪತಿ ಗ್ರಂಥಾಲಯಗಳಿಗೆ ಉಚಿತವಾಗಿ ನೀಡಿದರೆ ಒಳಿತು ಎಂದು ಅಭಿಪ್ರಾಯಪಟ್ಟರು.

ಗೌರವ ಉಪಸ್ಥಿತಿ ವಹಿಸಿದ್ದ ವಿಶ್ರಾಂತ ಅಧ್ಯಾಪಕ ಪಿ.ಜಿ.ಕೆಂಚಣ್ಣವರ ಮಾತನಾಡಿ, ಸತಿ-ಪತಿಗಳು ಸಾಹಿತ್ಯ ಕ್ಷೇತ್ರಕ್ಕೆ ಸೇವೆ ಸಲ್ಲಿಸುವುದು ತುಂಬಾ ವಿರಳ. ಬೆಳಗಾವಿಯಲ್ಲಿ ಜಗಜಂಪಿ ದಂಪತಿ ಅವರನ್ನು ಬಿಟ್ಟರೆ ಸಾಹಿತ್ಯ ಕ್ಷೇತ್ರದ ಸಾಧಕ ದಂಪತಿಗಳು ಎಂದರೆ ಅಬ್ಬಿಗೇರಿ ದಂಪತಿ. ಜಯಪ್ರಕಾಶ ಅಬ್ಬಿಗೇರಿ ಅವರ ಕೃತಿಗಳಲ್ಲಿ ಹಾಸ್ಯ ಪ್ರಜ್ಞೆ ಅಡಗಿದೆ ಎಂದರು.

ಕೃತಿ ಲೋಕಾರ್ಪಣೆಯನ್ನು ವಿಶ್ರಾಂತ ಪ್ರಾಚಾರ್ಯ ಬಿ.ಎಸ್. ಗವಿಮಠ ಮಾಡಿದರು. ಸಾಹಿತಿ ಸುನಂದಾ ಎಮ್ಮಿ ಪ್ರಾಚಾರ್ಯ ಡಾ.ನಿರ್ಮಲಾ ಬಟ್ಟಲ ಕೃತಿ ಪರಿಚಯ ಮಾಡಿದರು. ಬೆಳಗಾವಿ ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷೆ ಜಯಶೀಲಾ ಬ್ಯಾಕೋಡ ಅಧ್ಯಕ್ಷತೆ ವಹಿಸಿದ್ದರು.

ಆಶಾ ಯಮಕನಮರಡಿ ನಿರೂಪಿಸಿದರು. ಡಾ ನಿಖಿತಾ ಪಂಚಮಪಾಟೀಲ ಪ್ರಾರ್ಥಿಸಿದರು. ಡಾ ಅನ್ನಪೂರ್ಣ ಹಿರೇಮಠ ವಂದಿಸಿದರು.

## ಬಿಡುಗಡೆಯಾದ ಕೃತಿಗಳು

ಲೇಖಕಿ, ಉಪನ್ಯಾಸಕಿ ಜಯಶ್ರೀ ಅಬ್ಬಿಗೇರಿ ಅವರ ನಿಮ್ಮನ್ನು ನೀವು ಯಶಸ್ವಿ ವ್ಯಕ್ತಿ ಎಂದು ಭಾವಿಸಿ, ಮೆಲ್ಲ ಮೆಲ್ಲ ಈ ಪ್ರೀತಿ ಮೆಲ್ಲುವಾ, ಜೀವನದಿ, ಜೀವ ನೀಡುವ ಜೀವ ಅಪಾಯದಲ್ಲಿದೆ, ವಚನ ವಾಹಿನಿ, ಸೋಲಿನ ಸುಳಿಯಲ್ಲಿ ಗೆಲುವಿನ ತುದಿ ಇದೆ, ಕುಂತರೂ ನಿಂತರೂ ನಿನ್ನದೇ ತುಂತುರು, ಹಬ್ಬ ಬಂತು ಹಬ್ಬ, ಸೋಲು ಒಪ್ಪಿಕೊಳ್ಳುವ ಮುನ್ನ ಕೊಂಚ ಪ್ರಶ್ನಿಸಿಕೊಳ್ಳಿ, ಮನೋಲ್ಲಾಸ ಭಾಗ-1, ಮನೋಲ್ಲಾಸ ಭಾಗ-2 ಹಾಗೂ ಜಯಪ್ರಕಾಶ ಅವರ ಶ್ರೀಮತಿಗಳ ಶೃಂಗಸಭೆಗಳು, ಬಾನುಲಿ ನಗೆ, ಹೃದಯವೀಣೆ ಮಿಡಿದಾಗ ಡಾ. ಸಿದ್ದನಗೌಡ ಪಾಟೀಲ ಕೃತಿಗಳು ಲೋಕಾರ್ಪಣೆಗೊಂಡವು.

# ಬಾಲ್ಯವಿವಾಹ ತಡೆಗೆ ವ್ಯಾಪಕ ಜಾಗೃತಿ :ಡಿಸಿ ಟಿ.ಭೂಬಾಲನ್

ಉದಯರಶ್ಮಿ ನ್ಯೂಸ್



ವಿಜಯಪುರ: ಬಾಲ್ಯ ವಿವಾಹ ನಿಷೇಧ ಕಾಯ್ದೆ, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ ಸಮರ್ಪಕ ಜಾರಿ ಸೇರಿದಂತೆ ಮಹಿಳಾ ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ನೊಂದ ಮತ್ತು ಸಂಕಷ್ಟಕ್ಕೊಳಗಾಗಿರುವ ಮಹಿಳೆಯ-ರಿಗೆ ತಾತ್ಕಾಲಿಕ ಆಶ್ರಯ ಮತ್ತು ಪುನರವಸತಿ ಸೌಲಭ್ಯ ಒದಗಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ 2023-24ನೇ ಸಾಲಿನ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಹಾಗೂ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಬಾಲ್ಯವಿವಾಹವನ್ನು ತಡೆಗಟ್ಟುವ ನಿಟ್ಟಿನಲ್ಲಿ ಗ್ರಾಮೀಣ ಭಾಗದಲ್ಲಿ ವ್ಯಾಪಕ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾರ್ವಜನಿಕರಲ್ಲಿ ನಿಷೇಧ ಕಾಯ್ದೆ ಕುರಿತು ಜಾಗೃತಿ ಮೂಡಿಸಬೇಕು. ಬಾಲ್ಯ ವಿವಾಹವಾಗದಂತೆ ಆಶಾ-ಅಂಗನವಾಡಿ ಕಾರ್ಯಕರ್ತೆಯರು ಸೇರಿದಂತೆ ಸ್ಥಳೀಯ ಆಡಳಿತ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಬಾಲ್ಯ ವಿವಾಹಗಳನ್ನು ಪತ್ತೆ ಹಚ್ಚಿ, ಸಾಧ್ಯವಾದಷ್ಟು ಬಾಲ್ಯ ವಿವಾಹವಾಗುವ ಮೊದಲೇ ತಡೆಗಟ್ಟಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಬಾಲ್ಯ ವಿವಾಹ ಪ್ರಕರಣಗಳು ಕಂಡು ಬಂದಲ್ಲಿ ಕೂಡಲೇ ಕಾರ್ಯಪ್ರವೃತ್ತರಾಗಬೇಕು. ಬಾಲ್ಯ ವಿವಾಹಕ್ಕೆ ಸಂಬಂಧಿಸಿದಂತೆ ಪೋಷಕರು ಹಾಗೂ ಬಾಲ್ಯವಿವಾಹಕ್ಕೆ ಪ್ರೋತ್ಸಾಹ ನೀಡುವವರ ಮೇಲೆ ಪ್ರಕರಣ ದಾಖಲಿಸಬೇಕು. ಬಾಲ್ಯವಿವಾಹ ನಿಷೇಧ ಕುರಿತು ವ್ಯಾಪಕವಾಗಿ ಜಾಗೃತಿ ಮೂಡಿಸಬೇಕು. ಇದರಿಂದ ಮಕ್ಕಳ ಭವಿಷ್ಯ ಹಾಳಾಗುವ ಕುರಿತು ಜನರಲ್ಲಿ ತಿಳುವಳಿಕೆ ನೀಡುವ ಮೂಲಕ ಬಾಲ್ಯ ವಿವಾಹ ತಡೆಗೆ ಕ್ರಮ ವಹಿಸುವಂತೆ ಸೂಚಿಸಿದ ಅವರು, ಬಾಲ್ಯವಿವಾಹ ನಡೆಯುವ ಕುರಿತು ನೆರೆಹೊರೆಯವರು, ಸಾರ್ವಜನಿಕರು ಸಹ ಈ ಕುರಿತು ಜಿಲ್ಲಾಡಳಿತಕ್ಕೆ ಮಾಹಿತಿ ನೀಡುವ ಮೂಲಕ ಬಾಲ್ಯವಿವಾಹ ತಡೆಗಟ್ಟಲು ಕೈ ಜೋಡಿಸಬೇಕು ಎಂದು ಅವರು ಮನವಿ ಮಾಡಿಕೊಂಡರು.

ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ 2005ರನ್ವಯ ಮಹಿಳಾ ದೌರ್ಜನ್ಯ ಪ್ರಕರಣಗಳಲ್ಲಿ ಪ್ರಕರಣಗಳನ್ನು ದಾಖಲಿಸಿ ಕೌಟುಂಬಿಕ ದೌರ್ಜನ್ಯಕ್ಕೊಳಗಾದ ಮಹಿಳೆಯ-ರಿಗೆ ಕೌನ್ಸೆಲಿಂಗ್ ಪ್ರಕ್ರಿಯೆ ನಡೆಸಿ, ತಾತ್ಕಾಲಿಕವಾಗಿ ಆಶ್ರಯ ಒದಗಿಸಲು ಕ್ರಮ ವಹಿಸಬೇಕು ಎಂದು ಅವರು ಸೂಚನೆ ನೀಡಿದರು.

ಕುಟುಂಬದಿಂದ ನಿರ್ಲಕ್ಷಿಸಪಟ್ಟವರು, ಕೌಟುಂಬಿಕ ಕಲಹ, ವಿವಾಹ ವಿಚ್ಛೇದನ, ಪೋಕ್ಸೊ ಪ್ರಕರಣ ಸೇರಿದಂತೆ ಕೌಟುಂಬಿಕ ದೌರ್ಜನ್ಯಕ್ಕೊಳಗಾಗಿ ಶಕ್ತಿ ಸದನ ಸ್ವಾಧಾರ ಗೃಹ ಯೋಜನೆಯಡಿ ಆಶ್ರಯ ಪಡೆದ 1580 ಮಹಿಳೆಯರು ಮತ್ತು 273 ಮಕ್ಕಳಿಗೆ ಆಹಾರ, ಶಿಕ್ಷಣ, ಸಮಾಲೋಚನೆ, ವೈದ್ಯಕೀಯ ಕುಟುಂಬಕ್ಕೆ ಪುನರ್‌ಮಿಲನ್ ಮತ್ತು ಕಾನೂನಿನ ನೆರವಿನೊಂದಿಗೆ ಅವರ ನೈಪುಣ್ಯತೆಯನುಸಾರವಾಗಿ ಸ್ವಯಂ ಉದ್ಯೋಗ ತರಬೇತಿ ನೀಡುವ ಮೂಲಕ ಅವರನ್ನು ಸ್ವಾವಲಂಬಿಯನ್ನಾಗಿಸಲು ಕ್ರಮ ವಹಿಸಬೇಕು ಎಂದು ಅವರು ಸೂಚನೆ ನೀಡಿದರು.

ಜಿಲ್ಲೆಯ ವಿಜಯಪುರ, ಸಿಂದಗಿ ಬಸವನಬಾಗೇವಾಡಿಯಲ್ಲಿನ ಬಾಲಕಿಯರ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ವಸತಿ ನಿಲಯಗಳಲ್ಲಿ ಅಳವಡಿಸಲಾದ ಸಿಸಿಟಿವಿಗಳ ಸ್ಥಿತಿಗತಿ ಕುರಿತು ಹಾಗೂ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾ-ರಿಗಳು ತಿಂಗಳಲ್ಲಿ ಒಂದು ಬಾರಿ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಹಗಲು ಮತ್ತು ರಾತ್ರಿ ಮಹಿಳಾ ವಾರ್ಡನ್‌ಗಳು ಕಾರ್ಯನಿರತವಾಗಿರುವುದನ್ನು ಸಂಬಂಧಿಸಿದ ಅಧಿಕಾ-ರಿಗಳು ಖಚಿತಪಡಿಸಿಕೊಳ್ಳಬೇಕು. ವಿಜಯಪುರದ ಬಾಲಕಿಯರ ಬಾಲಮಂದಿರದ ಸುಧಾರಣೆ ಕ್ರಮ ಕೈಗೊಂಡು ಬಾಲಮಂದಿರದ ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡುವ ನಿಟ್ಟಿನಲ್ಲಿ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಮಾತೃವಂದನಾ ಯೋಜನೆಯಡಿ ನಿಗದಿತ ಪ್ರಗತಿ ಸಾಧಿಸಿ ಗುರಿ ಹೆಚ್ಚಿಸಬೇಕು. ಗರ್ಭಿಣಿ ಮಹಿಳೆಯ-ರಿಗೆ ಸಮರ್ಪಕವಾಗಿ ಪೌಷ್ಟಿಕಾಂಶ ಆಹಾರ ಒದಗಿಸಬೇಕು. ಅಂಗನವಾಡಿ ಕಾರ್ಯಕರ್ತರು ಪರಿಣಾಮಕಾ-ರಿಯಾಗಿ ಕಾರ್ಯನಿರ್ವಹಿಸಲು ಅವರ ಜವಾಬ್ದಾರಿಗಳ ಕುರಿತು ತರಬೇತಿ ಒದಗಿಸಬೇಕು. ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಹೆಣ್ಣು ಮಕ್ಕಳ ಸಮೀಕ್ಷೆ ನಡೆಸಬೇಕು. ಆ ಮಕ್ಕಳನ್ನು ಗುರುತಿಸಿ ಮರಳಿ ಶಾಲೆಗೆ ಕರೆ ತರಲು ಕ್ರಮ ವಹಿಸಬೇಕು ಎಂದು ಅವರು ಸೂಚಿಸಿದರು.


ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಖಿ ಕೇಂದ್ರಗಳಲ್ಲಿ ಪೋಕ್ಸೋ, ಬಾಲ್ಯವಿವಾಹ, ಅಪಹರಣ, ಲೈಂಗಿಕ ಹಲ್ಲೆ, ಕಿರುಕುಳ ಸೇರಿದಂತೆ ವಿವಿಧ ದೌರ್ಜನ್ಯಕ್ಕೊಳಗಾದವರನ್ನು ಕೌನ್ಸೆಲಿಂಗ್ ಪ್ರಕ್ರಿಯೆಗೊಳಪಡಿಸಿ ಮನೋಸ್ಥೈರ್ಯ ಹೆಚ್ಚಿಸಬೇಕು. ಈ ಸಖಿ ಕೇಂದ್ರಗಳು 24/7 ಕಾರ್ಯನಿರ್ವಹಿಸಬೇಕು. ಕೇಂದ್ರದಲ್ಲಿ ಕಡ್ಡಾಯವಾಗಿ ಬಯೋಮೆಟ್ರಿಕ್ ವ್ಯವಸ್ಥೆ ನಿರ್ವಹಣೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ ಶಿಂಧೆ ಸೂಚಿಸಿ, ಕೇಂದ್ರದಲ್ಲಿ ಡಿ ಗ್ರೂಪ್ ನೌಕರರ ನಿಯೋಜನೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಕೌಟುಂಬಿಕ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಕೌನ್ಸೆಲಿಂಗ್ ನಡೆಸಬೇಕು. ಮೊದಲು ಪ್ರಕರಣ ದಾಖಲಿಸಿ ಪ್ರಕರಣ ವರದಿಯಾದ ನಂತರ ಕಾನೂನು ಸೇವಾ ಪ್ರಾಧಿಕಾರಕ್ಕೆ ಮಾಹಿತಿ ಒದಗಿಸಬೇಕು. ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಪಠ್ಯೇತರ ಚಟುವಟಿಕೆಗೆ ಪ್ರೋತ್ಸಾಹ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಹಿರಿಯ ಸಿವ್ಹಿಲ್ ನ್ಯಾಯಾಧೀಶರಾದ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ ಕುಂದರ್ ಹೇಳಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೆ.ಕೆ.ಚವ್ಹಾಣ, ಕೌಶಲ್ಯಾಭಿವೃದ್ಧಿ ಅಧಿಕಾರಿ ಸಿ.ಬಿ.ಕುಂಬಾರ ಸೇ-ರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಡಿ.14ರಂದು ಮಂಡ್ರೂಪಗೆ ಸತ್ಯಮತೀರ್ಥ ಸ್ವಾಮೀಜಿ

ಉದಯರಶ್ಮಿ ನ್ಯೂಸ್



ಸೊಲ್ಲಾಪುರ: ಮಾಧ್ವ ಸಂಪ್ರದಾಯದ ಮುಖ್ಯಸ್ಥ ಉತ್ತರಾಧಿ ಮಠಾಧಿಪತಿ ಸತ್ಯಾತ್ಮತೀರ್ಥ ಸ್ವಾಮೀಜಿ ಗುರುವಾರ (14ರಂದು) ಮಂಡ್ರೂಪ್‌ಗೆ (ದಕ್ಷಿಣ ಸೊಲ್ಲಾಪುರ) ಆಗಮಿಸಲಿದ್ದಾರೆ. ಬೆಳಗ್ಗೆ ಏಳು ಗಂಟೆಗೆ ಮಂದ್ರೂಪಿನ ಶ್ರೀ ವಿಠ್ಠಲ ದೇವಸ್ಥಾನಕ್ಕೆ ಸ್ವಾಮಿ ಆಗಮಿಸುವರು.

8 ಗಂಟೆಗೆ ದೇವಸ್ಥಾನದಲ್ಲಿ ಸ್ವಾಮೀಜಿಯವರ ಪಾದ್ಯಪೂಜೆ, ಮುದ್ರಾಧಾರಣೆ ಕಾರ್ಯಕ್ರಮ ನಡೆಯಲಿದೆ. ನಂತರ ಸ್ವಾಮೀಜಿಯವರ ಆಶೀರ್ವಾದ ನಡೆಯಲಿದೆ. ಸತ್ಯಾತ್ಮತೀರ್ಥ ಸ್ವಾಮೀಜಿ ಪ್ರಥಮ ಬಾರಿಗೆ ಮಂಡ್ರೂಪ್‌ನ ವಿಠ್ಠಲ ದೇಗುಲಕ್ಕೆ ಆಗಮಿಸಲಿರುವ ಹಿನ್ನೆಲೆಯಲ್ಲಿ ಅವರಿಗೆ ಭಕ್ತಿಪೂರ್ವಕ ಸ್ವಾಗತ ನೀಡಲಾಗುತ್ತಿದೆ.

ದಕ್ಷಿಣ ಸೊಲ್ಲಾಪುರದ ಸೀನಾ-ಭೀಮಾ ಕಣಿವೆಯಲ್ಲಿ ಮಂದ್ರೂಪದ ಜೊತೆಗೆ ಭಕ್ತರು ಸ್ವಾಮಿಯ ಪಾದಪೂಜೆ ಸೇವೆಯನ್ನು ಮಾಡುವುದರಿಂದ ಭಕ್ತರು ಸಂತಸದಲ್ಲಿದ್ದಾರೆ.

ಮಂಗಳವಾರ (12ರಂದು) ಸೊಲ್ಲಾಪುರದ ಬಿಜಾಪುರ ರಸ್ತೆಯಲ್ಲಿರುವ ನಿಯೋಜಿತ್ ಮಠಕ್ಕೆ ಸ್ವಾಮೀಜಿ ಆಗಮಿಸಲಿದ್ದಾರೆ. ಹಾಗಾಗಿ ಗುರುವಾರ ಬೆಳಗ್ಗೆ ಏಳು ಗಂಟೆಗೆ ಮಂಡ್ರೂಪ್‌ಗೆ ಆಗಮಿಸಲಿದ್ದಾರೆಂದು ಎಂದು ಕುಲಕರ್ಣಿ ಮತ್ತು ಮಂದ್ರೂಪದ ಭಕ್ತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

# ಬಸವಣ್ಣನವರ ಸಂದೇಶದಿಂದ ಸರ್ವರಿಗೂ ಕಲ್ಯಾಣ :ಶಾಸಕ ನಾಡಗೌಡ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ಸಾಮಾಜಿಕ ಚಿಂತನೆ ಧರ್ಮೋಪದೇಶವನ್ನು ಇಡೀ ಜಗತ್ತಿನ ಜನತೆ ಒಪ್ಪಿಕೊಳ್ಳುತ್ತಿದ್ದಾರೆ. ಅಮೇರಿಕಾ, ಜಪಾನ, ರಶಿಯಾ ದೇಶಗಳಲ್ಲಿ ಭಾರತೀಯರನ್ನು ಬಸವಣ್ಣನವರ ನಾಡಿನವರು ಎಂದು ಗೌರವಿಸುತ್ತಾರೆ. ಬಸವಣ್ಣನವರು ಸಾರಿದ ಸಂದೇಶ ಎಲ್ಲ-ರಿಗೂ ಕಲ್ಯಾಣವಾಗುತ್ತಿದೆ ಎಂದು ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ ಹೇಳಿದರು.

ಪಟ್ಟಣದ ವಿಬಿಸಿ ಹೈಸ್ಕೂಲ್ ಮೈದಾನದಲ್ಲಿ ಹಮ್ಮಿಕೊಳ್ಳಲಾದ ಬಸವ ಪುರಾಣ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಜ್ಞಾನದಲ್ಲಿ ಭಾರತ ಮುಂದಿದೆ. ಆದರೆ ಮಾನವೀಯ ಮೌಲ್ಯಗಳು ಇಲ್ಲ. ಇಂದಿನ ದಿನ ಮಹಾಪುರುಷರ ಜಯಂತಿಗಳನ್ನು ಆಯಾ ಜಾತಿಯವರೇ ಮಾಡುತ್ತಾರೆ. ದೇವ ಮಾನವರನ್ನ ಜಾತಿಗೆ ಸೀಮಿತಗೊಳಿಸಿದ್ದರಿಂದ. ಸಮಾಜದಲ್ಲಿ ಒಡಕು, ವಿರಸಗಳು ಮೂಡಿವೆ. ಇವುಗಳನ್ನ ತೊಡೆದು ಹಾಕಿ ಬಸವಣ್ಣನವರ ತತ್ವಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದರು.

ದಿವ್ಯ ಸಾನಿಧ್ಯ ವಹಿಸಿದ್ದ ಕುಂಟೋಜಿ ಸಮಸ್ಥಾನ ಹಿರೇಮಠದ ಡಾ.ಚನ್ನವೀರ ದೇವರು ಮಾತನಾಡಿ, ಪುರಾಣ ಪ್ರವಚನಗಳು ಜನತೆಯನ್ನ ಸನ್ಮಾರ್ಗದಲ್ಲಿ ನಡೆಸುತ್ತವೆ. ಕಾರಣ ಪ್ರತಿಯೊಬ್ಬರೂ ಭಾಗಿಯಾಗಬೇಕು ಎಂದರು.

ಸಮಾಜ ಸೇವಕ ಸಿ.ಬಿ.ಅಸ್ಕಿ ಮಾತನಾಡಿ ದೈನಂದಿನ ಜೀವನದಲ್ಲಿ ರೋಗ ಮುಕ್ತರಾಗಲು ಪ್ರವಚನವೂ ಒಂದು ಕಾರಣ. ಪ್ರವಚನ ಆಲಿಸುವದರಿಂದ ಮಾನಸಿಕವಾಗಿ ಸದೃಢರಾಗುತ್ತೇವೆ. ಮೇಲಿಂದ ಮೇಲೆ ಇಂತಹ ಕಾರ್ಯಕ್ರಮಗಳು ನಡೆಯುತ್ತಿರಬೇಕು ಎಂದರು.

ಬಸವ ಪುರಾಣ ಸಮಿತಿಯ ಕಾರ್ಯಾಧ್ಯಕ್ಷ ಪ್ರಭುಗೌಡ ದೇಸಾಯಿ, ಕಸಾಪ ನಿಕಟಪೂರ್ವ ಅಧ್ಯಕ್ಷ ಎಂ.ಬಿ.ನಾವದಗಿ, ರಾಜಕೀಯ ಮುಖಂಡರಾದ ಶಂಕರಗೌಡ ಹಿರೇಗೌಡರ, ಶಾಂತಗೌಡ ಪಾಟೀಲ ನಡಹಳ್ಳಿ ಮಾತನಾಡಿ, ನಮ್ಮ ದೇಶದಲ್ಲಿ ಅನೇಕ ಶರಣರು ಬದುಕಿ ನಮಗೂ ಬದುಕಲು ಕಲಿಸಿದ್ದಾರೆ. ಬಸವಣ್ಣನವರು ಅಜ್ಞಾನ ಅಂ-ಧಕಾರದ ವಿರುದ್ಧ ಹೋರಾಡಿದ್ದಾರೆ. ಎಲ್ಲರನ್ನೂ ಕಲ್ಯಾಣಕ್ಕೆ ಕರೆತಂದು ಶರಣರನ್ನಾಗಿಸಿದ್ದಾರೆ. ಆದರೆ ಸದ್ಯದ ಪರಿಸ್ಥಿತಿಯಲ್ಲಿ ಅಧಿಕಾರಕ್ಕಾಗಿ ಸಮಾಜ ಸಮಾಜ ಒಡೆದು ಅಂಬೇಡ್ಕರ್ ರನ್ನು ಅವಮಾನಿಸುತ್ತಿದ್ದಾರೆ. ಇದೆಲ್ಲ ಕೊನೆಯಾಗಬೇಕು ಎಂದರು.

ಉಪ್ಪಿನ ಬೆಟಗೇರಿಯ ಮೂರುಸಾವಿರ ವಿರಕ್ತಮಠದ ವಿರೂಪಾಕ್ಷ ಮಹಾಸ್ವಾಮಿಗಳು ಪ್ರವಚನ ನೀಡಿದರು.

ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ಬಿ.ಸಿ.ಮೋಟಗಿ ಸೇ-ರಿದಂತೆ ಮತ್ತಿತರರು ಇದ್ದರು.

# ಆಮ್ಲಜನಕದ ಮಹತ್ವ ಅರಿವಾಗುವ ಕಾಲಬಂದಿದೆ

ಉದಯರಶ್ಮಿ ನ್ಯೂಸ್



ಹೊನವಾಡ: ದಿನಾಲೂ ಉಸಿರಾಡಲು ಇಷ್ಟು ಆಮ್ಲಜನಕ ಕೆಣಟಿಜಜಜಿಟಿಜಜಟ್ಟಿರುವ ಪ್ರಕೃತಿಗೆ ನಾವೇನಾದರೂ ಕೆಣಟಿಜಜಜಿಟಿಜಜ-ಡುಗೆ ಕೆಣಟಿಜಜಜಿಟಿಜಜಡಲೇಬೇಕು, ಇಂದೇನಾದರೂ ಈ ಕೆರೆಯ ಅಂದ ಸೊಬಗು ಹೆಚ್ಚುತ್ತಿದೆ ಎಂದರೆ ಅದಕ್ಕೆ ನಮ್ಮ ಭಾಗದ ಹಿಂದಿನ ಜಲ ಸಂಪನ್ಮೂಲ ಸಚಿವರು ಇಂದಿನ ಬೃಹತ್ ಮತ್ತು ಮಧ್ಯಮ ಕೈಗಾ-ರಿಕಾ ಸಚಿವ ಎಂ ಬಿ ಪಾಟೀಲರು ಕಾರಣ. ಅವರನ್ನು ನಾವು ಬಹಳಷ್ಟು ಸ್ಮರಿಸಬೇಕಾಗಿದೆ. ಪರಿಸರ ದಿನದಂದು ಮಾತ್ರ ಉಸಿರಾಡುವುದಿಲ್ಲ , ಪ್ರತೀ ದಿನ ನಮಗೆ ಆಮ್ಲಜನಕ ಪೂರೈಕೆ ಆಗಬೇಕು. ಪ್ರಸ್ತುತ ಆಮ್ಲಜನಕದ ಮಹತ್ವ ನಮಗೆ ಅರಿವಾಗುವ ಕಾಲಬಂದಿದೆ. ಇಂದು ಆಮ್ಲಜನಕಕ್ಕಾಗಿ ಹಣ ನೀಡುತ್ತೇವೆ. ಆದರೆ ಪರಿಸರದಲ್ಲಿ ಅದೆಷ್ಟೋ ವರ್ಷಗಳಿಂದ ಬೇರೂರಿ ಉಚಿತ ಗಾಳಿ, ತಂಪು, ಹಣ್ಣು, ಹೂ ನೀಡುವ ಮರವನ್ನು ಕ್ಷಣಮಾತ್ರದಲ್ಲಿ ಧರೆಗುರುಳಿಸಿ ಬಿಡುತ್ತೇವೆ. ಇಂದು ನಮ್ಮ ಸ್ವಾರ್ಥಕ್ಕೆ ತಕ್ಕ ಪಾಠ ಪ್ರಕೃತಿಯೇ ಕಲಿಸಿಕೊಡುತಿದೆ. ಎಂದು ಬಾಬುರಾವ್ ಮಹಾರಾಜರು ಹೇಳಿದರು.

ಕೆರೆಯ ಆವರಣದಲ್ಲಿ ನಡೆದ ಸ್ವಚ್ಛತಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದಲ್ಲಿ ಕೆರೆಯನ್ನು ಸ್ವಚ್ಛಗೊಳಿಸಿ ವಿಜಯಪುರ ತರಬೇತಿ ಸಂಸ್ಥೆಯ ಪ್ರಾಚಾರ್ಯ ಅಶೋಕ ಕಲಘಟಗಿ ಮಾತನಾಡಿ, ನಮ್ಮ ಮನೆಯ ಸುತ್ತಮುತ್ತಲ ಪ್ರದೇಶ ಹಾಗೂ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಕೇವಲ ಒಬ್ಬಿಬ್ಬ-ರಿಂದ ಇಂತಹ ಕಾರ್ಯ ಸಾಧ್ಯವಿಲ್ಲ. ಪ್ರತಿಯೊಬ್ಬರು ಕೈಜೋಡಿಸಿದಾಗ ಬದಲಾವಣೆ ಸಾಧ್ಯ' ಎಂದರು. ಕೆರೆಯ ಸುತ್ತಮುತ್ತಲಿನ ಪರಿಸರದಲ್ಲಿ, ಕಸವನ್ನು ಹೆಕ್ಕಿ ಸ್ವಚ್ಛಗೊಳಿಸಲಾಯಿತು.

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸುರೇಶ ಕಳ್ಳಿಮನಿ ನಮ್ಮ ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿ ಇಡುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ಈ ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಂಚಾಯತ ಕಾರ್ಯದರ್ಶಿ ಅಣ್ಣಪ್ಪ ಬಿದರಿ, ಡಿ ಬಿ ಡೆಂಬ್ರೆ, ಬಾಬುರಾಯ್ ದೇವನಾಯಕ, ಗೌರಿಶಂಕರ ಹಿರೇಮಠ, ಜೆ ಎನ್ ಬಡಳ್ಳಿ, ಸುರೇಶ ಚಾವರ, ಧರೆಪ್ಪ ಹಡಪದ, ಶ್ರೀಕಾಂತ್ ಕುಂಬಾರ, ಚಿದಾನಂದ ಅರಮೋತಿ, ಯಂಕಪ್ಪ ಉಪ್ಪಾರ, ಶಂಕರ ಕಟಿ, ಸುರೇಶ ನರಳೆ, ಮಹಾದೇವ ಜಾಧವ, ಸಂಜೀವ ಯಚ್ಚಿ, ತುಕಾರಾಮ ನಲವಡೆ, ಮಾಯಪ್ಪ ಪೂಜಾರಿ, ರೈತ ಸಂಘದ ಮಹಿಳೆಯರಾದ ಮಾಯಕ್ಕ ಚೌರಿ, ಮಹಾದೇವಿ ಚಾವರ, ಸರೋಜನಿ ಕೋಟ್ಯಾಳ, ಸುರೇಖಾ ಕಾತ್ರಾಳ, ಗ್ರಾಮ ಪಂಚಾಯತ್ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಸಮಸ್ತ ಹೊನವಾಡದ ಜನತೆ ಭಾಗವಹಿಸಿದ್ದರು.

# ಯಾಂತ್ರಿಕ ಯುಗದಲ್ಲಿ ಮಾನವೀಯ ಮೌಲ್ಯಗಳು ದೂರ

ಉದಯರಶ್ಮಿ ನ್ಯೂಸ್



ಸಿಂದಗಿ: ಇಂದಿನ ಯಾಂತ್ರಿಕ ಯುಗವು ಮಾನವೀಯ ಮೌಲ್ಯಗಳಿಂದ ನಮ್ಮನ್ನು ದೂರ ಮಾಡಿದೆ. ಇಂತಹ ಆದ್ಯಾತ್ಮಿಕ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ನಾಲತವಾಡದ ಶ್ರೀಗುರು ಸ್ವಾಮಿಗಳು ಹೇಳಿದರು.

ಶನಿವಾರದಂದು ತಾಲೂಕಿನ ಯಂಕಂಚಿ ಸಂಸ್ಥಾನ ಹಿರೇಮಠದಲ್ಲಿ ಲಿ.ಶ್ರೀ ರುದ್ರಮುನಿ ಶಿವಾಚಾರ್ಯರ 46ನೆಯ ಪುಣ್ಯಾರಾದನೆಯ ನಿಮಿತ್ಯವಾಗಿ ಹಮ್ಮಿಕೊಂಡ ಶ್ರೀ ಅಮ್ಮೋಘ ಸಿದ್ದೇಶ್ವರರ ಪುರಾಣವನ್ನು ಪ್ರಾರಂಭಿಸಿ ಮಾತನಾಡಿದ ಅವರು, ಅಮೋಘ ಸಿದ್ದೇಶ್ವರರು ಒಬ್ಬ ಪವಾಡ ಪುರುಷರು ಅಂತಹ ಮಹಾನ ಶರಣರ ಸಂದೇಶ, ಜೀವನ ಚರಿತ್ರೆ ಇಂದಿನ ಯುವ ಪೀಳಿಗೆಗೆ ತುಂಬಾ ಅವಶ್ಯಕವಾಗಿದೆ. ಶ್ರೀಮಠದ ಪೂಜ್ಯರು ಈ ಸುಂದರ ಪ್ರವಚನವನ್ನು ಹಮ್ಮಿಕೊಂಡಿದ್ದು ಶ್ಲಾಘನೀಯ ಎಂದರು.

ಈ ವೇಳೆ ಮಳ್ಳಿ ಹಿರೇಮಠದ ರುದ್ರಮುನಿ ಶಿವಾಚಾರ್ಯರು, ಚಿಕ್ಕರೂಗಿಯ ಈರಣ್ಣ ಶಾಸ್ತ್ರೀಗಳು ಮಾತನಾಡಿ, ಎಲ್ಲ ಸದ್ಭಕ್ತರು ಇದರ ಪಡೆದುಕೊಳ್ಳಬೇಕು. ಏಕೆಂದರೆ ಇಂದಿನ ದಿನಮಾನಗಳಲ್ಲಿ ಪುರಾಣ ಪ್ರವಚನ ಆಲಿಸುವುದರಿಂದ ಹಾಗೂ ಶರಣ ಸಂತರ ಜೀವನದ ಆದರ್ಶವನ್ನು ಪಾಲಿಸಿಕೊಂಡು ಅನುಸರಿಸಿಕೊಂಡು ಸಾಗಿದರೆ ನಮ್ಮ ಬದುಕು ಬಂಗಾರವಾಗುವದರಲ್ಲಿ ಸಂಶಯವಿಲ್ಲ. ಮಾನವ ಪ್ರತಿ ಕ್ಷೇತ್ರದಲ್ಲೂ ಅಪ್ಪಟ ಸಾಧನೆ ಮಾಡಿದ್ದಾನೆ. ಆದರೆ ತನ್ನನ್ನೇ ತಾನು ತಿಳಿಯುವಲ್ಲಿ ಹಿಂದೆ ಬಿದ್ದಿದ್ದಾನೆ ಎಂದು ವಿಷಾದ ವ್ಯಕ್ತಪಡಿಸಿದರು. ಇಂತಹ ಸತ್ಸಂಗದಿಂದ ಸುಂದರ ಜೀವನ ಕಟ್ಟಕೊಳ್ಳಲು ಸಾದ್ಯವಿದೆ ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಅಭಿನವ ರುದ್ರಮುನಿ ಶಿವಾಚಾರ್ಯರು ಆಶೀರ್ವಚನ ನೀಡಿದರು.

ಪುರಾಣಿಕರಾದ ವೀರಭದ್ರಯ್ಯ ಸ್ವಾಮಿಗಳು ಅಮೋಘ ಸಿದ್ದೇಶ್ವರರ ಜೀವನ ಚರಿತ್ರೆಯನ್ನು ಪ್ರಾರಂಭಿಸಿದರು.

ಈ ವೇಳೆ ಕಲ್ಲಯ್ಯ ಪಡದಳ್ಳಿ ಅವರು ಸಂಗೀತ ಹಾಗೂ ಯಡ್ರಾಮಿಯ ಪ್ರಾಣೇಶ ಅವರು ತಬಲಾ ನುಡಿಸಿ ಭಕ್ತರ ತನುಮನ ತಣಿಸಿದರು. ಪುರಾಣದಲ್ಲಿ ವಿವಿಧ ಮಾತಾಧೀಶರು, ಗ್ರಾಮದ ಸುತ್ತಮುತ್ತಲಿನ ಶ್ರೀಮಠದ ಭಕ್ತರು ಇದ್ದರು.

# ಕಟ್ಟಡ ಕಾರ್ಮಿಕರಿಗೆ ಉಚಿತ ಆರೋಗ್ಯ ಶಿಬಿರ

ಉದಯರಶ್ಮಿ ನ್ಯೂಸ್



ಸಿಂದಗಿ: ಕಟ್ಟಡ ಕಾರ್ಮಿಕರಲ್ಲಿ ಅತಿ ಹೆಚ್ಚು ಸಕ್ಕರೆ ಖಾಯಿಲೆ ಹಾಗೂ ರಕ್ತದೊತ್ತಡದಿಂದ ಬಳಲುತ್ತಿರುತ್ತಾರೆ ಆದರು ಕೂಡಾ ಅವರು ಎಲ್ಲಿ ಕೂಡಾ ತಪಾಸಣೆ ಮಾಡಿಕೊಂಡಿರುವುದಿಲ್ಲ ಎಂದು ಆರ್.ಕೆ ಆಸ್ಪತ್ರೆಯ ಆಡಳಿತಾಧಿಕಾರಿ ಅನೀಲಕುಮಾರ ರಾಠೋಡ ಹೇಳಿದರು.

ಪಟ್ಟಣದ ಸಂಗಮ ಸಂಸ್ಥೆಯಲ್ಲಿ ಸಂಗಮ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯಲ್ಲಿ ಕಟ್ಟಡ ಕಾರ್ಮಿಕರಿಗೆ ಹಮ್ಮಿಕೊಂಡ ಉಚಿತ ಆರೋಗ್ಯ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಟ್ಟಡ ಕಾರ್ಮಿಕರು ದಿನನಿತ್ಯ ದುಡಿಮೆ ಮಾಡಿ ಜೀವನ ಸಾಗಿಸುತ್ತಾರೆ. ಅವರಿಗೆ ಆಸ್ಪತ್ರೆಗೆ ಹೋಗಲು ನಿರ್ಲಕ್ಷ್ಯ ವಹಿಸುತ್ತಾರೆ. ಯಾವುದೇ ತಪಾಸಣೆ ಮಾಡಿಕ್ಕೊಳ್ಳುವುದಿಲ್ಲ. ಆದ್ದರಿಂದ ಪ್ರತಿಯೊಬ್ಬರು ಆರೋಗ್ಯವಾಗಿ ಇರಬೇಕು ಎಂಬ ಉದ್ದೇಶದಿಂದ ಕರ್ನಾಟಕ ಸರ್ಕಾರ ತಮ್ಮ ಮನೆ ಬಾಗಿಲಿಗೆ ವೈದ್ಯರನ್ನು ಕಳುಹಿಸಿದ್ದಾರೆ. ತಾವೆಲ್ಲರೂ ಈ ಉಚಿತ ಆರೋಗ್ಯ ತಪಾಸಣೆಯ ಸದುಪಯೋಗ ಪಡೆದುಕೊಂಡು ಆರೋಗ್ಯವಾಗಿರಿ ಎಂದರು.

ಈ ವೇಳೆ ಸಂಗಮ ಸಂಸ್ಥೆಯ ನಿರ್ದೇಶಕ ಫಾದರ್ ಸಂತೋಷ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ದೇಶದಲ್ಲಿ ಶ್ರಮ ಜೀವಿಗಳು ಅಂತ ಯಾರಾದರೂ ಇದ್ದಾರೆ ಎಂದರೆ ಅವರೆ ನಮ್ಮ ಕಟ್ಟಡ ಕಾರ್ಮಿಕರು. ಅವರು ಶ್ರದ್ದೆಯಿಂದ ಸಂಪೂರ್ಣ ಜವಾಬ್ದಾರಿಯಿಂದ ಮನೆ, ಶಾಲೆ, ಆಸ್ಪತ್ರೆಗಳು, ಕಟ್ಟಡ ಮಾಡುವವರೆಂದರೆ ಕಟ್ಟಡ ಕಾರ್ಮಿಕರು. ಆದ್ದರಿಂದ ಖಾಯಿಲೆಗಳು ಬರುವ ಮುನ್ನವೇ ಎಚ್ಚರ ವಹಿಸಬೇಕು. ಎಂದರು.

ಈ ಕಾರ್ಯಕ್ರಮದಲ್ಲಿ ಕಟ್ಟಡ ಕಾರ್ಮಿಕ ಸಂಘದ ಪದಾಧಿಕಾರಿಗಳು ಮತ್ತು ವಿವಿಧ ಹಳ್ಳಿಗಳಿಂದ ಬಂದ ಇತರೆ ಕಟ್ಟಡ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ಮಾಡಲಾಯಿತು. ಈ ವೇಳೆ ಸಂಸ್ಥೆಯ ಸಿಬ್ಬಂದಿ, ಕಟ್ಟಡ ಕಾರ್ಮಿಕರು ಸೇರಿದಂತೆ ಅನೇಕರು ಇದ್ದರು.

# ಮಹಿಳೆ ಮಮಕಾರದ ಮಾತೃಸ್ವರೂಪಿ :ಜಡಿಸಿದ್ಧೇಶ್ವರ ಶ್ರೀ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಉಡಿ ತುಂಬುವಂಥ ಕಾರ್ಯಕ್ರಮದಲ್ಲಿ ಮಹಿಳೆಯರ ಹೆಚ್ಚಿನ ಭಾಗವಹಿಸುವಿಕೆ ನಮ್ಮ ಸಂಪ್ರದಾಯದ ಪಾಲನೆ ಹಾಗೂ ಬೆಳವಣಿಗೆಯನ್ನು ಸೂಚಿಸುತ್ತದೆ ಎಂದು ಜಡಿಮಠದ ಜಡಿಸಿದ್ಧೇಶ್ವರ ಶ್ರೀಗಳು ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ ಗುಡ್ಡಾಪೂರ ಶ್ರೀದಾನಮ್ಮದೇವಿ ಪುರಾಣದ ಅಂಗವಾಗಿ ಜರುಗಿದ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಮಹಿಳೆ ಹಿಂದೆ, ಇಂದು, ಎಂದಿಗೂ ಮಮತೆ, ಮಮಕಾರದ ಮಾತೃ ಸ್ವರೂಪಿ. ಅಂತೆಯೇ ನಮ್ಮ ನೆಲದ ಸಂಪ್ರದಾಯ, ಸಂಸ್ಕೃತಿಗಳನ್ನು ಪಾಲಿಸಿ ಮುಂದುವರೆಸಿಕೊಂಡು ಹೋಗುವಲ್ಲಿ ಅವಳು ಸದಾ ಮುಂದು, ಅಂತೆಯೇ ಅವಳಿಗೆ ಪೂಜ್ಯನೀಯ ಸ್ಥಾನ ನೀಡಿದ್ದೇವೆ. ಎಂದು ಹೇಳುತ್ತಾ ಇಂದಿನ ಉಡಿ ತುಂಬುವ ಕಾರ್ಯದಲ್ಲಿ ಪಟ್ಟಣದ ಬಹುತೇಕ ಮಾತೆಯರು ಭಾಗವಹಿಸಿ ಯಶಸ್ವಿಗೊಳಿಸಿದ್ದು ಅತ್ಯಂತ ಸಂತೋಷದ ವಿಷಯ ಎಂದರು.

ಕಾರ್ಯಕ್ರಮದಲ್ಲಿ ಇಂದ್ರಾಬಾಯಿ ಕುದರಿ, ಸಾವಿತ್ರಿ ಹಿರೇಮಠ, ಮಹಾದೇವಿ ಪಾಟೀಲ, ನಿರ್ಮಲಾ ಯಾಳಗಿ, ರೇಣುಕಾ ಪಾಟೀಲ, ಪ್ರೇಮಾ ಬುದ್ನಿ, ದ್ರಾಕ್ಷಾಯಣಿ ಸೌದಿ, ಭಾರತಿ ಪಾಟೀಲ, ಸುರೇಖಾ ಬುದ್ನಿ, ಮಂಜುಳಾ ಕಕ್ಕಳಮೇಲಿ, ಭಾರತಿ ಬುದ್ನಿ, ಲಕ್ಷ್ಮೀ ಸಾಸಾಬಾಳ, ವಿಜಯಲಕ್ಷ್ಮಿ ಬುದ್ನಿ, ಗಂಗವ್ವ ಒಣರೊಟ್ಟಿ, ಮಾಯಾ ಪಾಟೀಲ, ಸುವರ್ಣಾ ನಾಶೀಮಠ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಕರವಿನಾಳದಲ್ಲಿ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಅಶೋಕ ಮನಗೂಳಿ ಚಾಲನೆ

# ಸಿಂದಗಿ ಕ್ಷೇತ್ರದ ಸಮಗ್ರ ಅಭಿವೃದ್ದಿಗೆ ಬದ್ಧ :ಶಾಸಕ ಮನಗೂಳಿ

ಉದಯರಶ್ಮಿ ನ್ಯೂಸ್



ಬ್ರಹ್ಮದೇವನಮಡು: ಸಿಂದಗಿ ಕ್ಷೇತ್ರದ ಸಮಗ್ರ ಅಭಿವೃದ್ದಿಗಾಗಿ ಹಗಲಿರುಳು ಶ್ರಮಿಸುವೆ. ರಸ್ತೆ, ಶಿಕ್ಷಣ, ಆರೋಗ್ಯ, ಉದ್ಯೋಗ ಕ್ಷೇತ್ರದತ್ತ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ತಾಲೂಕಿನ ಕರವಿನಾಳ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಕೆ.ಆರ್.ಐ.ಡಿ.ಎಲ್ ಸನ್ 2021-22 ನೇ ಸಾಲಿನ ಪ್ರಧಾನಮಂತ್ರಿ ಆದಶ9 ಗ್ರಾಮ ಯೋಜನೆಯಡಿಯಲ್ಲಿ 20 ಲಕ್ಷ ರೂ. ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಶನಿವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಸವ9ರ ಏಳ್ಗೆಗೆ ಶ್ರಮಿಸಿ, ಸಮಾಜದಲ್ಲಿ ಶಾಂತಿ - ನೆಮ್ಮದಿ ನೆಲೆಸುವ ಕೆಲಸ ಮಾಡುವೆ. ನಮ್ಮ ತಂದೆ ದಿ.ಶಾಸಕ ಎಂ.ಸಿ.ಮನಗೂಳಿ ಅವರ ಅವಧಿಯಲ್ಲಿ ನೆನೆಗುದಿಗೆ ಬಿದ್ದ ಕಾಮಗಾರಿಗೆ ಮರುಜೀವ ಕೊಡಲಾಗುವುದು. ಶೈಕ್ಷಣಿಕ ಪ್ರಗತಿಗಾಗಿ ಹೆಚ್ಚಿನ ಆದ್ಯತೆ ನೀಡುವೆ. ಸಂಕಷ್ಟದಲ್ಲಿರುವ ಜನರ ನೋವಿಗೆ ಸ್ಪಂದಿಸುವ ಉದ್ದೇಶದಿಂದಲೇ ನಮ್ಮ ಸಕಾ9ರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಯೋಜನೆಗಳ ಮೂಲಕ ಕಾಂಗ್ರೆಸ್ ಸಕಾ9ರ ನಿಮ್ಮ ಸಕಾ9ರ ಎನ್ನುವುದನ್ನು ದೃಡಪಡಿಸುತ್ತೇವೆ ಎಂದರು.

ಈ ಸಂದಭ9ದಲ್ಲಿ ಹೊನ್ನಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ಸಂಗನಗೌಡ ಬಿರಾದಾರ, ಧವಳಾರದ ಒಡೆಯರ ಮುತ್ಯಾ, ವಿಜುಗೌಡ ಬಿರಾದಾರ, ಕಾಂಗ್ರೆಸ್ ಮುಖಂಡ ಯುವ ಮುಖಂಡ ಹಣಮಂತ್ರಾಯಗೌಡ ಬಿರಾದಾರ, ಮುಖಂಡ ರವಿರಾಜ್ ದೇವರಮನಿ, ಬಸವರಾಜ ಮಾರಲಭಾವಿ, ಆರ್.ಜಿ.ಮಾನಶೆಟ್ಟ್, ಯಂಕನಗೌಡ ಪಾಟೀಲ, ಬಸವರಾಜ ಹದಗಲ್ಲ್, ಶ್ರೀಶೈಲ್ ಜಾಲವಾದಿ, ಸಾಹೇಪಟೇಲ ಮುರಡಿ, ಗ್ರಾಪಂ ಪಿಡಿಒ ಎಸ್.ಸಿ.ನಾಯ್ಕೋಡಿ, ಮಲ್ಲು ಕೆಂಭಾವಿ, ಬಸನಗೌಡ ಉಳ್ಳೆಸೂರ, ಪ್ರಕಾಶಗೌಡ ಬಿರಾದಾರ, ಚಂದ್ರು ಕೆಂಭಾವಿ, ರಾಮನಗೌಡ ಪಾಟೀಲ, ಹಣಮಂತ ಯಂಟಮಾನ, ದೇವಿಂದ್ರ ತೋನಶ್ಯಾಳ ಸೇರಿದಂತೆ ಮತ್ತಿತರಿದ್ದರು.

# ಕಾಲುವೆಗೆ ನೀರು: ನಿಷೇಧಾಜ್ಞೆ ಜಾರಿ

ಉದಯರಶ್ಮಿ ನ್ಯೂಸ್



ವಿಜಯಪುರ: ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಲು ಕೆಬಿಜೆಎನ್‌ಎಲ್ ವತಿಯಿಂದ ಕಾಲುವೆಗಳ ಮೂಲಕ ಬಹುಹಳ್ಳಿ ಕುಡಿಯುವ ನೀರಿನ ಯೋಜನೆಯಡಿ ಜನವಸತಿಗಳಿಗೆ ಕಾಲುವೆಗಳ ಮೂಲಕ ನೀರು ಪೂರೈಸಲಾಗುತ್ತಿದ್ದು, ಜಲಸಂಗ್ರಹಾರ-ಕೆರೆಗಳಲ್ಲಿರುವ ನೀರನ್ನು ಕುಡಿಯುವ ನೀರಿಗಾಗಿ ಮಾತ್ರ ಉಪಯೋಗಿಸುವಂತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡಲು ಮುನ್ನೆಚ್ಚರಿಕೆ ಕ್ರಮವಾಗಿ ಜಲಸಂಗ್ರಹಗಾರ-ಕೆರೆಗಳ ವ್ಯಾಪ್ತಿಯ 100 ಅಡಿ ಪ್ರದೇಶದಲ್ಲಿ 2023ರ ಡಿ.7ರಿಂದ 2024ರ ಜನವರಿ 01ರವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಆದೇಶ ಹೊರಡಿಸಿದ್ದಾರೆ.

ಈ ಸಂದರ್ಭದಲ್ಲಿ ಜಲಸಂಗ್ರಹಗಾರ-ಕೆರೆಗಳ ವ್ಯಾಪ್ತಿಯ 100 ಅಡಿ ಸುತ್ತಮುತ್ತಲಿನ ಪ್ರದೇಶದಲ್ಲಿ ಸಾರ್ವಜನಿಕರು ಗುಂಪು-ಗುಂಪಾಗಿ ಓಡಾಡುವುದು, ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿದಲಾಗಿದೆ. ಜಲಸಂಗ್ರಹಗಾರ-ಕೆರೆಗಳಿಂದ ಅಕ್ರಮ ಪಂಪಸೆಟ್, ಸೈಫನ್, ಜಲಚರದಿಂದ ಸೈಫನ್ ಮೂಲಕ ನೀರನ್ನು ಉಪಯೋಗಿಸಕೂಡದು. ಅಕ್ರಮ ಪಂಪಸೆಟ್ ಮೂಲಕ ನೀರನ್ನು ಬಳಸುತ್ತಿದ್ದಲ್ಲಿ ಅಂತಹ ಪಂಪಸೆಟ್‌ಗಳ ವಿದ್ಯುತ್ ಸಂಪರ್ಕವನ್ನು ಕಡಿಗೊಳಿಸಲಾಗುವುದು. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಧ್ವಜ ನಿಧಿ ಸಂಗ್ರಹ: ವಿಜಯಪುರ ಜಿಲ್ಲೆಗೆ ಪ್ರಥಮ ಸ್ಥಾನ

ಉದಯರಶ್ಮಿ ನ್ಯೂಸ್



ವಿಜಯಪುರ: ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಅಂಗವಾಗಿ ಬೆಂಗಳೂರಿನ ರಾಜಭವನದಲ್ಲಿ ಡಿ.7ರಂದು ನಡೆದ ಸಮಾರಂಭದಲ್ಲಿ 2022ನೇ ಸಾಲಿನಲ್ಲಿ ಅತಿ ಹೆಚ್ಚು ಧ್ವಜ ನಿಧಿ ಸಂಗ್ರಹ ಮಾಡಿದ ವಿಜಯಪುರ ಜಿಲ್ಲೆಗೆ ಪ್ರಥಮ ಸ್ಥಾನ ನೀಡಲಾಗಿದೆ.

ಸಮಾರಂಭದಲ್ಲಿ ವಿಜಯಪುರ ಜಿಲ್ಲೆ ಅತಿ ಹೆಚ್ಚು ನಿಧಿ ಸಂಗ್ರಹ ಮಾಡಿದ್ದರಿಂದ ಲೆಫ್ಟಿನೆಂಟ್ ಜನರಲ್ ಬಿ.ಕೆ.ರೆಪ್ಸವಾಲ್, ಎ.ವಿ.ಎಸ್.ಎಂ. ವಿ.ಎಸ್.ಎಂ. ಕಮಾಂಡೆಂಟ್ ಎ.ಎಸ್.ಸಿ. ಸೆಂಟರ್ ಮತ್ತು ಕಾಲೇಜ್ ಬೆಂಗಳೂರು ಇವರಿಂದ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅವರು ಪ್ರಶಸ್ತಿ ಪಾರಿತೋಷಕವನ್ನು ಸ್ವೀಕರಿಸಿದ್ದಾರೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಗ್ರ ನೀರಾವರಿಗೆ ಆಗ್ರಹಿಸಿ ಆಮರಣ ಉಪವಾಸ

ಉದಯರಶ್ಮಿ ನ್ಯೂಸ್



ಆಲಮಟ್ಟಿ: ಇಲ್ಲಿ ಶಾಸ್ತ್ರಿ ಜಲಾಶಯ ನಿರ್ಮಿಸಿ ಎರಡು ದಶಕಗಳಿಂದ ನೀರು ಸಂಗ್ರಹಿಸುತ್ತಿದ್ದರೂ ಜಿಲ್ಲೆಯನ್ನು ಸಮಗ್ರ ನೀರಾವರಿ ಏಕೆ ಮಾಡುತ್ತಿಲ್ಲ? ಈ ಭಾಗದ ಜನರ ತಾಳ್ಮೆಯನ್ನು ಪರೀಕ್ಷಿಸಬೇಡಿ ಎಂದು ಇಟಗಿಯ ಗುರುಶಾಂತವೀರ ಸ್ವಾಮೀಜಿ ಹೇಳಿದರು.

ಸೋಮವಾರ ಆಲಮಟ್ಟಿಯ ಕೃಷ್ಣಾ ಭಾಗ್ಯ ಜಲ ನಿಗಮದ ಮುಖ್ಯ ಅಭಿಯಂತರರ ಕಚೇರಿಯ ಆವರಣದಲ್ಲಿ ಕೃಷ್ಣಾ ಕಣಿವೆ ರೈತ ಹಿತರಕ್ಷಣಾ ಸಮಿತಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ವಾಸುದೇವ ಮೇಟಿ ಬಣ) ಮತ್ತು ಕರ್ನಾಟಕ ರಕ್ಷಣಾ ವೇದಿಕೆ ಆಲಮಟ್ಟಿ ಘಟಕದವತಿಯಿಂದ ಆಲಮಟ್ಟಿ ಜಲಾಶಯ 519.6ಮೀ.ದಿಂದ 524.256ಮೀ.ಗೆ ಎತ್ತರಿಸಿ ಜಿಲ್ಲೆಯನ್ನು ಸಮಗ್ರ ನೀರಾವರಿಗೊಳಪಡಿಸಿ ಎಂದು ಆಗ್ರಹಿಸಿ ನಡೆಯುತ್ತಿರುವ ಅಹೋರಾತ್ರಿ ಆಮರಣ ಉಪವಾಸ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಮಾತನಾಡಿದರು.

ಜಿಲ್ಲೆಗೆ ನೀರು ಕೊಡಬೇಕಾದರೆ ಸ್ಕೀಂ.ಗಳನ್ನು ಹೇಳುತ್ತಿದ್ದೀರಿ, ಅನ್ಯ ಜಿಲ್ಲೆಗಳಿಗೆ ನೀರು ಕೊಡಲು ಸ್ಕೀಂ.ಗಳಿಲ್ಲವೇ? ಜಿಲ್ಲೆಯಲ್ಲಿನ್ನು ಸಮರ್ಪಕವಾಗಿ ಕಾಲುವೆ ಜಾಲಗಳನ್ನೂ ನಿರ್ಮಿಸುತ್ತಿಲ್ಲವೇಕೆ? ಜಿಲ್ಲೆಗೆ ನೀರು ಕೊಡಬೇಕಾದರೆ ಜಲಾಶಯ ಎತ್ತರದ ಸಬೂಬು ಹೇಳುತ್ತಿದ್ದೀರಿ, ಹಾಗಿದ್ದರೆ ಜಲಾಶಯವನ್ನು ತ್ವರಿತವಾಗಿ ಎತ್ತರಿಸಲು ಅಗತ್ಯಕ್ರಮಕ್ಕೈಗೊಳ್ಳಬೇಕಾಗಿರುವುದು ಸರ್ಕಾರಗಳ ಕೆಲಸ. ಇದರ ಶಾಸಕರು, ಸಚಿವರು, ಸಂಸದರುಗಳು ಗಟ್ಟಿ ಧ್ವನಿಯಲ್ಲಿ ಮಾತನಾಡುತ್ತಿಲ್ಲವೇಕೆ? ಈಗ ನಡೆಯುತ್ತಿರುವ ಅಧಿವೇಶನದಲ್ಲಾದರೂ ಈ ಭಾಗದ ಎಲ್ಲಾ ರಾಜಕೀಯ ಪಕ್ಷಗಳ ವಿಧಾನಸಭೆ ಮತ್ತು ವಿಧಾನಪರಿಷತ್ ಸದಸ್ಯರುಗಳು ವಿಧಾನಮಂಡಲದಲ್ಲಿ ಹಾಗೂ ಸಂಸದರುಗಳು ಲೋಕಸಭೆಯಲ್ಲಿ ಗಟ್ಟಿ ಧ್ವನಿಯಾಗಿ ಮಾತನಾಡಿ ಈ ಭಾಗದ ಜನತೆ ನ್ಯಾಯ ಒದಗಿಸಿಕೊಡಿ ಎಂದು ಹೇಳಿದರು.

ರಾಜ್ಯದ ಸುಮಾರು 12ಜಿಲ್ಲೆಗಳ ಜೀವನಾಡಿಯಾಗಿರುವ ಕೃಷ್ಣೆಯನ್ನು ಸಮರ್ಪಕವಾಗಿ ಬಳಸಿಕೊಂಡು ಈ ಭಾಗದ ಜನ-ಜಾನುವಾರುಗಳ ದಾಹ ನಿವಾರಿಸುವದರೊಂದಿಗೆ ಬರದಿಂದ ಬೇಸತ್ತಿರುವ ಭೂ ಮಾತೆಗೆ ನೀರುಣಿಸಿ ಬೆಳೆಬೆಳೆಯಲು ಪಕ್ಷಾತೀತವಾಗಿ ಎಲ್ಲರೂ ಧ್ವನಿಯೆತ್ತಿ ಸರ್ಕಾರದ ಕಣ್ತೆರೆಸಬೇಕು ಎಂದು ನುಡಿದರು.

ಧರಣಿಯಲ್ಲಿ ನಿಡಗುಂದಿ ರುದ್ರೇಶ್ವರ ಸಂಸ್ತಾನದ ರುದ್ರಮುನಿ ಸ್ವಾಮೀಜಿ, ಬಸವರಾಜ ಕುಂಬಾರ, ಗುರುನಾಥ ಬಗಲಿ, ಬಿ.ಎಂ.ಕೋಕರೆ, ತಿರುಪತಿ ಬಂಡಿವಡ್ಡರ, ಬಸವರಾಜ ಬಾಗೇವಾಡಿ, ಮಲ್ಲನಗೌಡ ಪಾಟೀಲ, ಗುರುರಾಜ ವಡ್ಡರ, ತಿರುಪತಿ ವಡ್ಡರ, ಸಂಗಣ್ಣ ಕೋತಿನ್, ರೇಷ್ಮಾ ಪಡೇಕನೂರ, ಲಕ್ಷ್ಮೀ ರಾಠೋಡ, ಗ್ರಾ.ಪಂ.ಮಾಜಿ ಅಧ್ಯಕ್ಷೆ ಸೈದಮ್ಮಾ ಬೆಣ್ಣಿ ಮೊದಲಾದವರಿದ್ದರು.

# ಆದರ್ಶ ಶಿಕ್ಷಕರ ಪ್ರಶಸ್ತಿಗೆ ಭಾಜನರಾದ ರೇಣುಕಾ, ಭೀಮನಗೌಡ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಜಿಲ್ಲಾ ಆದರ್ಶ ಶಿಕ್ಷಕರ ವೇದಿಕೆ ಕೊಡಮಾಡುವ ಜಿಲ್ಲಾ ಆದರ್ಶ ಶಿಕ್ಷಕ ಹಾಗೂ ಶಿಕ್ಷಕಿ ಪ್ರಶಸ್ತಿಗೆ ದೇವರಹಿಪ್ಪರಗಿ ಎಲ್.ಟಿ ಕನ್ನಡ ಪ್ರಾಥಮಿಕ ಶಾಲೆಯ ಶಿಕ್ಷಕಿ ರೇಣುಕಾ ಒಡೆಯರ್ ಹಾಗೂ ಆದರ್ಶ ಶಿಕ್ಷಕ ಪ್ರಶಸ್ತಿಗೆ ಕೋರವಾರ ಎಲ್.ಟಿ ನಂ.1 ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಯ ಸಹಶಿಕ್ಷಕ ಭೀಮನಗೌಡ ಸಿದರಡ್ಡಿ ಭಾಜನರಾಗಿದ್ದಾರೆ.

ವಿಜಯಪುರ ಕಂದಗಲ್ಲ ಹಣಮಂತ್ರಾಯ ರಂಗಮಂದಿರದಲ್ಲಿ ಶುಕ್ರವಾರ ಜರುಗಿದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಇರ್ವರಿಗೂ ಪ್ರಶಸ್ತಿ ನೀಡಿ ಗೌರವಿಸಲಾಯಿತು.



# ಲೋಕ್ ಅದಾಲತ್ ಗೆ ಕಕ್ಷಿದಾರರ ಅಭೂತಪೂರ್ವ ಸ್ಪಂದನೆ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲೆಯಲ್ಲಿ ಡಿ.9ರಂದು ನಡೆದ ರಾಷ್ಟ್ರೀಯ ಲೋಕ್ ಅದಾಲತ್ ಯಶಸ್ವಿಯಾಗಿದ್ದು, ಕಕ್ಷಿದಾರರು ಹಾಗೂ ವಕೀಲರ ಸಹಕಾರದಿಂದ ಈ ಅದಾಲತ್‌ನಲ್ಲಿ 184 ಸಿವಿಲ್ ದಾವೆಗಳು, 182 ಚೆಕ್ ಬೌನ್ಸ್ ಪ್ರಕರಣಗಳು, 152 ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣ ಹಾಗೂ 11 ಕೌಟುಂಬಿಕ ಪ್ರಕರಣಗಳು ಮತ್ತು 97 ರಾಜಿಯಾಗಬಹುದಾದ ಕ್ರಿಮಿನಲ್ ಪ್ರಕರಣಗಳು ಸೇರಿದಂತೆ ನ್ಯಾಯಾಲಯದಲ್ಲಿ ವಿಚಾರಣೆಗೆ ಬಾಕಿ ಇದ್ದ ಒಟ್ಟು 11441 ಪ್ರಕರಣಗಳು ಮತ್ತು 1,41,083 ವ್ಯಾಜ್ಯ ಪೂರ್ವ ಪ್ರಕರಣಗಳು ಮುಕ್ತಾಯಗೊಂಡಿವೆ.

ರಾಷ್ಟ್ರೀಯ ಲೋಕ್ ಅದಾಲತನ ಯಶಸ್ಸಿಗೆ ಸಹಕರಿಸಿದ ವಕೀಲರು, ಕಕ್ಷಿದಾರರು, ವಿಮಾ ಕಂಪನಿಯ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳಿಗೆ ಮತ್ತು ರಾಷ್ಟ್ರೀಯ ಲೋಕ್ ಅದಾಲತ್ ಪ್ರಚಾರದಲ್ಲಿ ಸಹಭಾಗಿಯಾದವರಿಗೆ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಶಿವಾಜಿ ಅನಂತ ನಲವಡೆ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ ಕುಂದರ ಅವರು ಅಭಿನಂದನೆ ಸಲ್ಲಿಸಿದ್ದಾರೆ.